ಸಂಪುಟ : 10 ಸಂಚಿಕೆ: 217 ಪುಟ : 4+2 ಬೆಲೆ: 3.00 ಬುಧವಾರ ಅಕ್ಟೋಬರ್ 08 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 217 Pages : 4+2 Price : 3.00 Wednesday October 08 2025 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ದಾರ್ಶನಿಕರ ಜೀವನ ಸದಾ ಪ್ರೇರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಆದಿಕವಿ, ರಾಮಾಯಣ, ಮಹಾಕಾವ್ಯದ ಮೊದಲ ರಚನೆಕಾರರು ಮಹರ್ಷಿ ವಾಲ್ಮೀಕಿಯವರು. ನಾರದ ಮಹರ್ಷಿಗಳ ಉಪದೇಶ ಪಡೆದು ತಾವು ಮಾಡುತ್ತಿದ್ದ ಅಸಹಜ ಕಾರ್ಯಗಳ ಪಾಪಕೃತ್ಯಗಳಲ್ಲಿ ಬಂಧುಗಳು ಭಾಗಿಯಾಗುವುದಿಲ್ಲ ಎಂಬುದನ್ನು ಅರಿತು, ಅಂದೇ ಮನಃಪರಿವರ್ತನೆ ಹೊಂದಿ, ಮಹಾನ್ ತಪಸ್ವಿಗಳಾಗಿ, ದೈವತ್ವವನ್ನು ಪಡೆದು, ರಾಮಾಯಣ ಮಹಾಕಾವ್ಯ ರಚಿಸಿ ಇಂದು ಎಲ್ಲರಿಂದಲೂ ಪೂಜಿಸಲ್ಪಡುತ್ತಿದ್ದಾರೆ ಎಂದು ಗದಗ -ಬೆಟಗೇರಿ ನಗರಸಭೆ ಪೌರಾಯುಕ್ತರಾದ ರಾಜಾರಾಮ ಪವಾರ ನುಡಿದರು.

ಅವರು ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯದಲ್ಲಿ ಏರ್ಪಡಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಮಾತನಾಡಿದರು.

ಸಮಾರಂಭದಲ್ಲಿ ಕಾರ್ಯಾಲಯ ವ್ಯವಸ್ಥಾಪಕ ಪರುಶುರಾಮ ಶೇರಖಾನೆ, ಸ.ಕಾ.ನಿ. ಅಭಿಯಂತರ ಎಚ್.ಎ. ಬಂಡಿವಡ್ಡರ, ಶ್ರೀಶೈಲ ಸಂಕನಗೌಡ್ರ, ಎಂ.ಆರ್. ಪಾಟೀಲ್, ಡಿ.ಎಚ್. ಸೀತಿಮನಿ, ನಾಗರಾಜ ಗುತ್ತಿ, ಶಬಾನಾ ದಳವಾಯಿ, ಪುಷ್ಪಲತಾ ಕಡೆಮನಿ, ಲೋಕೇಶ್ ಗಾಡಗೋಳಿ, ರಾಜು ಬಾಕಳೆ, ಮುಜಾವರ, ರೇಣುಕಾ ಭಟ್, ರಮೇಶ್ ನಾಗಲೀಕರ್ ಮುಂತಾದವರು ಭಾಗವಹಿಸಿದ್ದರು.

### ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಮತ

# ಆದರ್ಶಗಳ ಪಾಲನೆಯಿಂದ ಬದುಕು ಸುಂದರ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀರಾಮನ ಚರಿತ್ರೆಯನ್ನು ಜಗತ್ತಿಗೆ ತೋರಿಸುವ ಪಣತೊಟ್ಟು ಕಾವ್ಯರೂಪದಲ್ಲಿ ರಾಮಾಯಣವನ್ನು ಪರಿಚಯಿಸಿದವರು ಶ್ರೀ ಮಹರ್ಷಿ ವಾಲ್ಮೀಕಿ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಬಣ್ಣಿಸಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಗದಗ-ಬೇಟಗೇರಿ ಇವರುಗಳ ಸಹಯೋಗದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.




ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ಕಾವ್ಯದಲ್ಲಿ ಶ್ರೀರಾಮನ ಸಂಪೂರ್ಣ ಜೀವನ ಚಿತ್ರವನ್ನು ನಮಗೆಲ್ಲ ಅರಿಯುವಂತೆ ಕಟ್ಟಿಕೊಟ್ಟಿದ್ದಾರೆ. ಅಲ್ಲದೆ, ಶ್ರೀರಾಮನ ಆದರ್ಶ ಜೀವನ ಹಾಗೂ ಯಶಸ್ಸಿನ ಕುರಿತು ತಿಳಿಸಿದ್ದಾರೆ. ಶ್ರೀರಾಮನ ಜೀವನದ ತತ್ವಾದರ್ಶನಗಳನ್ನು ಸುಂದರವಾಗಿ ರಚನೆ ಮಾಡುವುದು ಸುಲಭದ ಮಾತಲ್ಲ. ನಾವುಗಳೆಲ್ಲ ಆದರ್ಶದ ಬೆನ್ನತ್ತಬೇಕು. ಅವುಗಳ ಪಾಲನೆಯಿಂದ ನಮ್ಮ ಜೀವನ ಸುಂದರವಾಗುತ್ತದೆ ಎಂದರು.

ಶಿಕ್ಷಕ ವಿರೇಶ ವಾಲ್ಮೀಕಿ ಉಪನ್ಯಾಸ ನೀಡುತ್ತಾ, ಸರ್ಕಾರ ಕಳೆದ 16 ವರ್ಷಗಳಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸುತ್ತಿರುವುದು ಸಂತಸದ ವಿಷಯ. ಮನುಕುಲದ ಒಳಿತಿಗಾಗಿ ಹಲವು ಗ್ರಂಥ ಕಾವ್ಯಗಳು ಹೊರಬಂದಿವೆ. ಅವುಗಳಲ್ಲಿ ವಿಶೇಷ ಸ್ಥಾನ ಪಡೆಯಲು ಮನುಷ್ಯನ ಜೀವನ ಉತ್ಸಾಹ ಅಧಿಕಗೊಳಿಸಲು ಸಹಕಾರಿಯಾಗಿದೆ. ಇವುಗಳಲ್ಲಿ ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಅಗ್ರ ಪಂಕ್ತಿಯಲ್ಲಿದೆ ಎಂದು ಹೇಳಿದರು.

ರಾಮಾಯಣವು ಏಳು ಮಹಾ ಖಂಡಗಳು ಹಾಗೂ 24,000 ಶ್ಲೋಕಗಳನ್ನು ಒಳಗೊಂಡ ಮಹಾಕಾವ್ಯವಾಗಿದೆ. ವಾಲ್ಮೀಕಿ ಅವರ ರಾಮಾಯಣವು ಐತಿಹಾಸಿಕ, ಚಾರಿತ್ರಿಕ ಮಹಾಕಾವ್ಯವೆಂದು ಬಣ್ಣಿಸಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಮರಟ್ಟಿ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಮಹನೀಯರನ್ನು ಸನ್ಮಾನಿಸಲಾಯಿತು. ನಿವೃತ್ತ ಪ್ರಾಧ್ಯಾಪಕಿ ಶಕುಂತಲಾ ಸಿಂದೂರ ಅವರು ವಾಲ್ಮೀಕಿ ಅವರ ಕುರಿತು ಸಂಗ್ರಹಿಸಿ ರಚಿಸಿದ ಗ್ರಂಥವನ್ನು ಅತಿಥಿಗಳು ಬಿಡುಗಡೆಗೊಳಿಸಿದರು.

ಸಮಾರಂಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪ ವಿಭಾಗಾಧಿಕಾರಿ ಗಂಗಪ್ಪ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ್ ಬಳ್ಳಾರಿ ಸೇರಿದಂತೆ ನಗರಸಭೆಯ ಸದಸ್ಯರು, ಸಮಾಜದ ಮುಖಂಡರು, ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು.

> ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಅವರು ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವದ ಶುಭಾಶಯಗಳನ್ನು ತಿಳಿಸಿದರು. ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ ಅನುಪಸ್ಥಿತಿಯಲ್ಲಿ ಸಚಿವರ ವಾಲ್ಮೀಕಿ ಜಯಂತಿಯ ಸಂದೇಶವನ್ನು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ ವಾಚಿಸಿದರು.

### ಚಿಕ್ಕವಡ್ಡಟ್ಟಿ ಗ್ರಾಮದಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಕಾಂಗ್ರೆಸ್ ಬಡವರ ಹಿತ ಕಾಯುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ಯಾರಂಟಿ ಯೋಜನೆಯಿಂದ ಲಕ್ಷಾಂತರ ಮಹಿಳೆಯರು ತಮ್ಮ ಕುಟುಂಬದ ಆರ್ಥಿಕ ಸ್ಥಿತಿಯನ್ನು ಸುಧಾರಿಸಲು ಸಾಧ್ಯವಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಾವಕಾಶಗಳು ಹೆಚ್ಚಿದ್ದು, ಉತ್ತಮ ಸಮಾಜ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಮತ್ತಷ್ಟು ಬಲಯುತವಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.



ಡಂಬಳ ಹೋಬಳಿಯ ಚಿಕ್ಕವಡ್ಡಟ್ಟಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಕಪ್ಪತ್ತಗಿರಿ ರಸ್ತೆಯಲ್ಲಿರುವ ಶ್ರೀ ಯಲ್ಲಮ್ಮನ ದೇವಸ್ಥಾನಕ್ಕೆ ಕೊಳವೆ ಮಾರ್ಗ ಅಳವಡಿಕೆ ವಿದ್ಯುದೀಕರಣ ಮಾಡುವುದು, ಶ್ರೀ ಬೀರಲಿಂಗೇಶ್ವರ ಗುಡಿಯ ಸುತ್ತಲೂ ಸಿ.ಸಿ ರಸ್ತೆ ನಿರ್ಮಾಣ, ಕೆರೆಯ ಸುತ್ತ ಜಾಲರಿ ಅಳವಡಿಕೆ, ಶಾಲಾ ಕೊಠಡಿ ಮೇಲ್ಛಾವಣಿ ನಿರ್ಮಾಣ, ಸ್ಮಾರ್ಟ್ ಕ್ಲಾಸ್ ಮುಂತಾದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ, ಗ್ರಂಥಾಲಯ, ಶಾಲಾ ನವೀಕೃತ ಕಟ್ಟಡ ಉದ್ಘಾಟಿಸಿ ಮಾತನಾಡಿದರು.

ಸರ್ಫಿಂಗ್ ಕ್ರೀಡೆಯಲ್ಲಿ ಕಂಚಿನ ಪದಕ ಪಡೆದ ಯುವಕನಿಗೆ 1 ಲಕ್ಷ ರೂ ಪ್ರೋತ್ಸಾಹ ಧನವನ್ನು ಶಾಸಕ ಜಿ.ಎಸ್. ಪಾಟೀಲ ವಿತರಿಸಿದರು. ಮುರಡಿ ಗ್ರಾಮದಲ್ಲಿ ಸಾರ್ವಜನಿಕರ ಅಹವಾಲು ಸ್ವಿಕರಿಸಿದರಲ್ಲದೆ, ಚಿಕ್ಕವಡ್ಡಟ್ಟಿ ಗ್ರಾಮದ ಆರೋಗ್ಯ ಕೇಂದ್ರಕ್ಕೆ ಸೂಕ್ತ ವೈದ್ಯರನ್ನು ನೇಮಿಸುವಂತೆ ದೂರವಾಣಿ ಮೂಲಕ ಹಿರಿಯ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ಮುಂಡರಗಿ ತಾಲೂಕಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ತಹಸೀಲ್ದಾರ್ ಯರಿಸ್ವಾಮಿ, ಇಒ ವಿಶ್ವನಾಥ ಹೊಸಮನಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಉದಯಕುಮಾರ ಯಲಿವಾಳ, ಗ್ರಾ.ಪಂ ಅಧ್ಯಕ್ಷೆ ಶೋಭಾ ಕೊಡ್ಲಿ, ಹಾರೂಗೇರಿ ಗ್ರಾ.ಪಂ ಅಧ್ಯಕ್ಷೆ ಶಾಂತವ್ವ ಭರಮಕ್ಕನವರ, ಉಪಾಧ್ಯಕ್ಷೆ ರೇಖಾ ಭಜಂತ್ರಿ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಗೋಣಿಬಸಪ್ಪ ಕೊರ್ಲಹಳ್ಳಿ, ಮಹೇಶ ಗಡಗಿ, ಬಸವರಡ್ಡಿ ಬಂಡಿಹಾಳ, ಪುಲಕೇಶಗೌಡ ಪಾಟೀಲ, ಬಸವರಾಜ ಶಿರೋಳ, ಬಾಬು ಮೂಲಿಮನಿ, ರಾಜು ಡಾವಣಗೇರಿ, ಗುತ್ತಿಗೆದಾರರಾದ ನಾಗರಾಜ ಸಜ್ಜನ, ಲಕ್ಷ್ಮಣ ಬಾದಾಮಿ, ಹಾಲೇಶ ಹಳ್ಳಿ, ಪ್ರಧಾನಿ ಕರಿ, ದೇವಪ್ಪ ಗೌರಿ, ಬಸಪ್ಪ ಮಾಯನ್ನವರ, ಮಲ್ಲಪ್ಪ ಬಳ್ಳಾರಿ, ಸುರೇಶ ಮೇಗಲಮನಿ, ವಸಂತ ಮೇಗಲಮನಿ, ಮನೋಜ ರಾಠೋಡ, ಶೇಖರ ಪವಾರ, ಉಮೇಶ ಲಮಾಣಿ, ಭುವನೇಶ್ವರಿ ಕಲ್ಲಕುಟಿಗರ, ವಿಶ್ವನಾಥ ಪಾಟೀಲ, ಬಿಇಒ ಗಂಗಾಧರ ಅಣ್ಣಿಗೇರಿ, ಸಿಡಿಪಿಒ ಮಹಾದೇವ, ಪಿಡಿಒ ಮಹೇಶ ಅಲಿಪುರ, ಗ್ರಾ.ಪಂ ಸದಸ್ಯರು, ರೈತರು, ಗ್ರಾಮದ ಹಿರಿಯರು ಇದ್ದರು.

> ಪ್ರತಿ ಗ್ರಾಮದಲ್ಲಿ ಗ್ರಂಥಾಲಯ, ಶಾಲೆಗಳ ಶೈಕ್ಷಣಿಕ ಬೆಳವಣಿಗೆಗೆ ಆದ್ಯತೆ ನೀಡಲಾಗುತ್ತಿದೆ. ಓದುವಿಕೆಗೆ ಕೊನೆಯಿಲ್ಲ, ಓದು ನಿಮಗೆ ಉತ್ತಮ ಸ್ಥಾನವನ್ನು ಕಲ್ಪಿಸುತ್ತದೆ. ಪಂಚ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಮಧ್ಯವರ್ತಿಗಳಿಲ್ಲದೆ ನೇರವಾಗಿ ಫಲಾನುಭವಿಗಳಿಗೆ ತಲುಪಿಸುವ ಮೂಲಕ ಕಾಂಗ್ರೆಸ್ ಪಕ್ಷ ಕಡು ಬಡವರ, ರೈತರ, ಕಾರ್ಮಿಕರ, ಯುವಕರ ಹಿತ ಕಾಯುತ್ತಿದೆ. ವಿವಿಧ ಕೆರೆಗಳನ್ನು ಭರ್ತಿಗೊಳಿಸುವ ಜಾಲವಾಡಗಿ ಏತ ನೀರಾವರಿ ಕೆಲಸ ಶೀಘ್ರವೇ ಪ್ರಾರಂಭವಾಗಲಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

## ಎತ್ತಿನಬಂಡಿ ಗ್ರಾಮೀಣ ಕ್ರೀಡೆಗೆ ಪ್ರೋತ್ಸಾಹದನ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸಂಬಂದಿಸಿದಂತೆ ಮುಖ್ಯ ಮಂತ್ರಿಗಳು ತಮ್ಮ 2025/26ನೇ ಸಾಲಿನ ಆಯ ವ್ಯಯ ಭಾಷಣದ ಕಂಡಿಕೆ ಸಂಖ್ಯೆ 397ರಲ್ಲಿ ಗ್ರಾಮೀಣ ಕ್ರೀಡೆಗಳನ್ನು ಪೋತ್ಸಾಹಿಸಲು ಹಾಗೂ ಉತ್ತೇಜಿಸಲು ಎತ್ತಿನಬಂಡಿ ಕ್ರೀಡೆಯನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸುವ 15 ಸಂಘ ಸಂಸ್ಥೆಗಳಿಗೆ ತಲಾ 2 ಲಕ್ಷ ಗಳಂತೆ ಅನುದಾನ ನೀಡಿ ಪ್ರೋತ್ಸಾಯಿಸಲಾಗುವುದು.

ಗದಗ ಜಿಲ್ಲೆಯಲ್ಲಿ ಎತ್ತಿನ ಬಂಡಿ ಕ್ರೀಡೆಯನ್ನು ಆಯೋಜಿಸಲು ಆಸಕ್ತಿಯುಳ್ಳವರು ತಮ್ಮ ಸಂಘ ಸಂಸ್ಥೆಯ ಪೂರ್ಣ ವಿವರವನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕೆ.ಎಚ್ ಪಾಟೀಲ ಜಿಲ್ಲಾ ಕ್ರಿಡಾಂಗಣ ಗದಗ. ಇಲ್ಲಿಗೆ ದಿ. 16/10/2025 ರೊಳಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲು ಕೋರಿದೆ.

## ಬಿ.ಆರ್.ಪಾಟೀಲ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ ಅವರು ಬುಧವಾರ (08.10.2025) ರಂದು ಹುಬ್ಬಳ್ಳಿ ಹಾಗೂ ಗದಗ ಜಿಲ್ಲೆಗಳಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.



ಕಾರ್ಯಕ್ರಮದ ವೇಳಾಪಟ್ಟಿಯ ಪ್ರಕಾರ, ಅವರು ಬೆಳಿಗ್ಗೆ 10 ಗಂಟೆಗೆ ಗದಗದ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಲಿರುವ ಕಿತ್ತೂರು ಕರ್ನಾಟಕದ ಅಭಿವೃದ್ಧಿ ಹಾಗೂ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಚರ್ಚಿಸಲು ಸಭೆ ಜರುಗಿಸುವರು. ಸಂಜೆ ವೇಳೆಗೆ ಅವರು ಗದಗದಿಂದ ಹುಬ್ಬಳ್ಳಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

### ಸಕ್ಕರಾರುತಿ ಬೆಳಗುವ ಬೆಳದಿಂಗಳ ಹಬ್ಬದಲ್ಲಿ ತಳ್ಳಿಹಾಳ ಗ್ರಾಮಕ್ಕೆ ಆವರಿಸಿದ ಕಾರ್ಗತ್ತಲು

# ಪಾದಯಾತ್ರೆ ಹೊರಟವರು ಮಸಣದತ್ತ





■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ತಳ್ಳಿಹಾಳ ಗ್ರಾಮದಿಂದ ಹುಲಿಗೆಮ್ಮ ದೇವಿ ದೇವಸ್ಥಾನಕ್ಕೆ ಪಾದಯಾತ್ರೆ ಹೊರಟಿದ್ದ ಭಕ್ತರ ಮೇಲೆ ಖಾಸಗಿ ಬಸ್ಸೊಂದು ಹರಿದ ಪರಿಣಾಮ ಗ್ರಾಮದ ಮೂವರು ಸ್ಥಳದಲ್ಲಿಯೇ ಮೃತರಾಗಿರುವ ದುರ್ಘಟನೆ ಸೋಮವಾರ ಮಧ್ಯರಾತ್ರಿ ನಡೆದಿದ್ದು, ಇಡೀ ಗ್ರಾಮದಲ್ಲಿ ಕಾರ್ಗತ್ತಲು ಆವರಿಸುವಂತೆ ಮಾಡಿದೆ.

ರವಿವಾರ ರಾತ್ರಿ 9ಕ್ಕೆ ತಳ್ಳಿಹಾಳ ಗ್ರಾಮದಿಂದ 7 ಜನ ಭಕ್ತರು ಹುಲಿಗೆಮ್ಮ ದೇವಸ್ಥಾನಕ್ಕೆ ಪಾದಯಾತ್ರೆ ಹೊರಟಿದ್ದರು. ದೇವಸ್ಥಾನ ಅಣತಿ ದೂರದಲ್ಲಿರುವಾಗಲೇ ಕೊಪ್ಪಳ ಜಿಲ್ಲೆಯ ಕುಕುಂಬಳ್ಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಖಾಸಗಿ ಬಸ್ ಪಾದಯಾತ್ರಿಕರ ಮೇಲೆ ಹರಿದಿದೆ. ಇದರಿಂದ ಗ್ರಾಮದ ಮೂವರು ಸ್ಥಳದಲ್ಲಿಯೇ ಮೃತರಾಗಿದ್ದು, ನಾಲ್ವರು ಗಾಯಗೊಂಡಿದ್ದಾರೆ. ಓರ್ವ ಮಹಿಳೆಯ ಸ್ಥಿತಿ ಗಂಭೀರವಾಗಿದೆ.

ಈ ದುರ್ಘಟನೆಯಲ್ಲಿ ತಾಯಿ, ಮಗ ಹಾಗೂ ಪಕ್ಕದ ಮನೆಯ ಓರ್ವ ಯುವಕ ಮೃತರಾಗಿದ್ದು, ಕಟುಂಬಸ್ಥರ ದುಃಖ ಮುಗಿಲು ಮುಟ್ಟಿದೆ. ಗ್ರಾಮದ ಅನ್ನಪೂರ್ಣ ಕಳಕಪ್ಪ ಮ್ಯಾಗೇರಿ (46) ಮತ್ತು ಇವರ ಮಗನಾದ ಶರಣಪ್ಪ ಕಳಕಪ್ಪ ಮ್ಯಾಗೇರಿ (19), ಪಕ್ಕದ ಮನೆಯ ಪ್ರಕಾಶ ಅಶೋಕ ಮಾಡಲಗೇರಿ (23) ಎಂಬ ಯುವಕ ಸೇರಿ ಒಟ್ಟು ಮೂರು ಜನರು ಸ್ಥಳದಲ್ಲಿಯೇ ಮೃತರಾಗಿದ್ದಾರೆ. ಕಳಕವ್ವ ಮ್ಯಾಗೇರಿ (35) ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ತಿಳಿದು ಬಂದಿದೆ. ಮಲ್ಲಿಕಾರ್ಜುನ ಮ್ಯಾಗೇರಿ, ಆದೇಶ ಹಂಡಿ, ಶಿದ್ದಪ್ಪ ಹಂಡಿ ಪ್ರಾಣಾಪಯದಿಂದ ಪಾರಾಗಿದ್ದಾರೆ.

ನಮ್ಮ ಗ್ರಾಮದಲ್ಲಿ ಇಂತಹ ದುರ್ಘಟನೆ ಇದುವರೆಗೂ ನಡೆದಿಲ್ಲ. ಇಂತಹ ಆಘಾತಕಾರಿ ಸುದ್ದಿಗಳನ್ನು ನಾವೆಂದೂ ಕೇಳಿದ್ದಿಲ್ಲ ಎಂದು ಇಡೀ ಗ್ರಾಮವೇ ಕಣ್ಣೀರು ಹಾಕುತ್ತಿದೆ.

> ಈ ದುರ್ಘಟನೆ ನನ್ನ ಮನಸ್ಸಿಗೆ ತೀವ್ರ ದುಃಖ ತರಿಸಿದೆ. ಗ್ರಾಮದ ಮೂವರು ಸಾವನ್ನಪ್ಪಿದ್ದು ದುಃಖಕರ ಸಂಗತಿಯಾಗಿದೆ. ಕುಟುಂಬಸ್ಥರ ದುಃಖದಲ್ಲಿ ನಾನು ಕೂಡ ಭಾಗಿಯಾಗಿದ್ದೇನೆ. ತಳ್ಳಿಹಾಳ ಗ್ರಾಮಕ್ಕೆ ತೆರಳಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿ, ಧೈರ್ಯ ತುಂಬುವ ಕೆಲಸ ಮಾಡಲಿದ್ದೇನೆ.
>
> **– ಜಿ.ಎಸ್. ಪಾಟೀಲ.**
> ಶಾಸಕರು, ರೋಣ.

### ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಗದಗ ಜಿಲ್ಲೆಯ ಶ್ರೇಷ್ಠ ಸಾಧನೆಗೆ ಸಿ.ಎನ್. ಕುಂದಗೋಳ ಮೆಚ್ಚುಗೆ

# ಸಂಘಟಿತ ಪ್ರಯತ್ನದಿಂದ ಗದಗ ಮುಂಚೂಣಿಯಲ್ಲಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯಾದ್ಯಂತ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯದಲ್ಲಿ ಗದಗ ಜಿಲ್ಲೆ ಶೇ.93ರಷ್ಟು ಸಾಧನೆ ದಾಖಲಿಸಿ ರಾಜ್ಯದಲ್ಲಿ ಅತ್ಯುತ್ತಮ ಸ್ಥಾನ ಗಳಿಸಿದ್ದು, ಈ ಸಾಧನೆಗೆ ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಸಿ.ಎನ್. ಕುಂದಗೋಳ ಮೆಚ್ಚುಗೆ ವ್ಯಕ್ತಪಡಿಸಿದರು.



ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಆಯೋಗ ನಿಗದಿಪಡಿಸಿದ ಅವಧಿಯೊಳಗೆ ಗದಗ ಜಿಲ್ಲೆಯಲ್ಲಿ ಸಮೀಕ್ಷೆ ಕಾರ್ಯ ಅತ್ಯಂತ ಶ್ರದ್ಧೆಯಿಂದ ಹಾಗೂ ಯೋಜಿತವಾಗಿ ನಡೆಯುತ್ತಿದೆ. ಜಿಲ್ಲೆಯಲ್ಲಿ 6 ಸಾವಿರಕ್ಕೂ ಹೆಚ್ಚು ಎನ್‌ಎಸ್‌ಎಸ್ ವಿದ್ಯಾರ್ಥಿಗಳನ್ನು ಸಮೀಕ್ಷಾ ಕಾರ್ಯದಲ್ಲಿ ಬಳಸಿರುವುದು ಶ್ಲಾಘನೀಯ. ಅವರು ಮನೆಮನೆಗೆ ತೆರಳಿ ಜನರ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಯ ಕುರಿತು ಮಾಹಿತಿಯನ್ನು ಸಂಗ್ರಹಿಸಲು ಸಮೀಕ್ಷಾದಾರರು ಆಗಮಿಸುವ ಕುರಿತು ಸರಿಯಾದ ಮಾಹಿತಿ ನೀಡುವಂತೆ ಮೊದಲೇ ಜಾಗೃತಿ ಮೂಡಿಸಿದ್ದು ಪ್ರಗತಿ ಸಾಧಿಸಲು ಸಹಕಾರಿಯಾಗಿದೆ. ಈ ರೀತಿಯ ಸಂಘಟಿತ ಪ್ರಯತ್ನದಿಂದಲೇ ಗದಗ ಜಿಲ್ಲೆ ರಾಜ್ಯದ ಶ್ರೇಷ್ಠ ಜಿಲ್ಲೆಗಳ ಪೈಕಿ ಒಂದಾಗಿದೆ ಎಂದು ಹೇಳಿದರು.

> ಇದುವರೆಗೆ ಶೇ.93 ಕಾರ್ಯ ಪೂರ್ಣಗೊಂಡಿದ್ದು, ಹೊಸ 4 ಮತ್ತು 5ನೇ ಆ್ಯಪ್ ವರ್ಷನ್‌ಗಳ ಮೂಲಕ ಡೇಟಾ ಸಂಗ್ರಹ ಕಾರ್ಯ ಸರಳವಾಗಿ ಹಾಗೂ ನಿಖರವಾಗಿ ನಡೆಯುತ್ತಿದೆ. ಇನ್ನೆರಡು ದಿನಗಳಲ್ಲಿ ಸಂಪೂರ್ಣ ಸಮೀಕ್ಷೆ ಮುಕ್ತಾಯಗೊಳ್ಳಲಿದೆ. ತಮ್ಮ ಇಲಾಖೆಯ ಕೆಲಸದ ನಡುವೆಯೂ ಸಮೀಕ್ಷೆ ಸಮಯಕ್ಕೆ ಪೂರ್ಣಗೊಳ್ಳುವಂತೆ ಕ್ಷೇತ್ರ ಮಟ್ಟದಲ್ಲಿ ಹೆಸ್ಕಾಂ ನೌಕರರು ಸಹಕಾರ ನೀಡಿದ್ದಾರೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮೆಚ್ಚುಗೆ ವ್ಯಕ್ತಪಡಿಸಿದರು.

ಸಮೀಕ್ಷೆಯಲ್ಲಿ ಸಹಕರಿಸಿದ ಜಿಲ್ಲಾಧಿಕಾರಿಗಳು, ಇಲಾಖಾ ಮುಖ್ಯಸ್ಥರು, ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳಿಗೆ ಹೃತ್ಪೂರ್ವಕ ಅಭಿನಂದನೆಗಳು. ಗದಗ ಜಿಲ್ಲೆಯ ಈ ಮಾದರಿ ಪ್ರಗತಿ ರಾಜ್ಯದ ಇತರ ಜಿಲ್ಲೆಗಳಿಗೂ ಪ್ರೇರಣೆಯಾಗಲಿ ಎಂದು ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಸಮೀಕ್ಷೆಯ ಯಶಸ್ಸಿಗೆ ಎಲ್ಲಾ ಇಲಾಖೆಗಳ ಸಂಯೋಜನೆ ಮುಖ್ಯ ಪಾತ್ರ ವಹಿಸಿದೆ. ನಗರಸಭೆಯ ವಾಹನಗಳಲ್ಲಿ ಜಿಂಗಲ್‌ಗಳ ಮೂಲಕ ಜನಜಾಗೃತಿ ಮೂಡಿಸಲಾಯಿತು. ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತೆಯರು ಸಮೀಕ್ಷಾ ಕಾರ್ಯದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದಾರೆ. ಸಮೀಕ್ಷೆಯಲ್ಲಿ ಒಟ್ಟು 65 ಪ್ರಶ್ನೆಗಳಿದ್ದು, ಅವುಗಳನ್ನು ಜನರಿಗೆ ಸರಳವಾಗಿ ಅರ್ಥವಾಗುವಂತೆ ತಿಳಿಸಿ ಮಾಹಿತಿ ಸಂಗ್ರಹಿಸಲಾಗಿದೆ.

ಇ ದ ' ೯ ▸▸3ನೇ ಪುಟಕ್ಕೆ

## ಸಂಪಾದಕೀಯ

# ಪ್ರಜಾಪ್ರಭುತ್ವದ ಅಡಿಪಾಯದ ಮೇಲೆ ದಾಳಿ

ಭಾರತದ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಮೇಲೆ ವಕೀಲರೊಬ್ಬರು ಶೂ ಎಸೆಯುವ ಯತ್ನದ ಘಟನೆ ಕೇವಲ ನ್ಯಾಯಾಂಗ ನಿಂದನೆ ಅಲ್ಲ, ಇದು ನಮ್ಮ ಪ್ರಜಾಪ್ರಭುತ್ವದ ಅಡಿಪಾಯದ ಮೇಲಿನ ಹೇಯ ದಾಳಿಯಾಗಿದೆ.

ಖಜುರಾಹೋದ ವಿಷ್ಣು ವಿಗ್ರಹದ ವಿಚಾರಣೆಯ ಸಂದರ್ಭದಲ್ಲಿ ಸಿಜೆಐ ಗವಾಯಿ ಅವರು ಆಡಿದ "ದೇವರನ್ನೇ ಕೇಳಿ" ಎಂಬ ಮಾತು, ಅರ್ಜಿಯನ್ನು ವಜಾಗೊಳಿಸುವ ನ್ಯಾಯಾಂಗದ ಒಂದು ಭಾಗವಾಗಿತ್ತು.

ಆದರೆ, ವಕೀಲ ರಾಕೇಶ್ ಕಿಶೋರ್ ಅವರು ಇದನ್ನು 'ಸನಾತನ ಧರ್ಮಕ್ಕೆ ಅವಮಾನ' ಎಂದು ಬಿಂಬಿಸಿ, ನ್ಯಾಯಾಂಗದ ಅತ್ಯುನ್ನತ ಸ್ಥಾನದ ಘನತೆಗೆ ಧಕ್ಕೆ ತರುವಂತಹ ಹೀನ ಕೃತ್ಯಕ್ಕೆ ಇಳಿದಿದ್ದಾರೆ.

ಈ ಘಟನೆಯು ರಾಜಕೀಯ ಮತ್ತು ಜಾತಿಯ ಸ್ವರೂಪ ಪಡೆದಿರುವುದು ದುರದೃಷ್ಟಕರ. ಸಿಜೆಐ ಗವಾಯಿ ಅವರು ದಲಿತ ಸಮುದಾಯಕ್ಕೆ ಸೇರಿದವರು ಎಂಬ ಅಂಶವನ್ನು ಬಳಸಿಕೊಂಡು, ಈ ಕೃತ್ಯವನ್ನು 'ಮನು ವಾದಿ' ಮನಸ್ಥಿತಿಯ ಪ್ರತೀಕ ಎಂದು ವ್ಯಾಖ್ಯಾನಿಸಲಾಗುತ್ತಿದೆ. ಆದರೆ, ನ್ಯಾಯಾಲಯದೊಳಗೆ, ನ್ಯಾಯಮೂರ್ತಿಯ ಕಚೇರಿಗೆ ಧಾರ್ಮಿಕ ಆಕ್ರೋಶದ ಕಾರಣ ನೀಡಿ ದೈಹಿಕ ದಾಳಿಗೆ ಪ್ರಯತ್ನಿಸುವುದು ಅಸಹನೀಯ. ಇದು ನಾಗರಿಕ ಸಮಾಜದಲ್ಲಿನ ವಾದ-ವಿವಾದದ ಎಲ್ಲೆಯನ್ನು ಮೀರಿ ಹಿಂಸೆಗೆ ಇಳಿದಂತಾಗಿದೆ.

ಭಾರತೀಯ ನ್ಯಾಯಾಂಗ ವ್ಯವಸ್ಥೆಯು ಸಂವಿಧಾನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತದೆ. ನ್ಯಾಯಾಧೀಶರ ಟೀಕೆ ಅಥವಾ ಆದೇಶಗಳ ಬಗ್ಗೆ ಅಸಮಾಧಾನವಿದ್ದರೆ, ಮೇಲ್ಮನವಿ ಅಥವಾ ಕಾನೂನು ಪರಿಹಾರದ ಮಾರ್ಗಗಳಿವೆ. ಆದರೆ, ವಕೀಲರೇ ಶಿಸ್ತಿನ ಎಲ್ಲೆ ಮೀರಿದರೆ, ಸಾಮಾನ್ಯ ಜನರ ನಂಬಿಕೆ ಏನಿರಬೇಕು?

ಈ ಘಟನೆಯ ನಂತರವೂ ವಿಚಲಿತರಾಗದೆ ವಿಚಾರಣೆಯನ್ನು ಮುಂದುವರೆಸಿದ ಸಿಜೆಐ ಗವಾಯಿ ಅವರ ಧೈರ್ಯ ಪ್ರಶಂಸನೀಯ. ಬಾರ್ ಕೌನ್ಸಿಲ್ ಆಫ್ ಇಂಡಿಯಾ ತಕ್ಷಣವೇ ಆರೋಪಿ ವಕೀಲರನ್ನು ಅಮಾನತುಗೊಳಿಸಿರುವುದು ಸರಿಯಾದ ಕ್ರಮ.

ಧರ್ಮ ಮತ್ತು ಭಾವನೆಗಳು ಪ್ರಜಾಪ್ರಭುತ್ವದ ದೇಗುಲವಾದ ನ್ಯಾಯಾಲಯದೊಳಗೆ ಅರಾಜಕತೆಯನ್ನು ಸೃಷ್ಟಿಸಲು ಸಾಧನವಾಗಬಾರದು. ಈ ಘಟನೆಗೆ ಕಠಿಣ ಕ್ರಮ ಜರುಗಿಸಿ, ನ್ಯಾಯಾಂಗದ ಘನತೆ ಮತ್ತು ಸಂವಿಧಾನದ ಪರಮೋಚ್ಚತೆಯನ್ನು ಎತ್ತಿಹಿಡಿಯುವುದು ಅನಿವಾರ್ಯ.

### ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಲು ಪಿಎಸ್‌ಐ ಐಶ್ವರ್ಯ ನಾಗರಾಳ ಮನವಿ

# ಸೈಬರ್ ಅಪರಾಧಗಳ ಬಗ್ಗೆ ಎಚ್ಚರವಾಗಿರಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಹಾಗೂ ಸುತ್ತಲಿನ ಗ್ರಾಮಗಳಲ್ಲಿ ಅಹಿತಕರ ಘಟನೆಗಳು ನಡೆಯದಿರಲು ಸಾರ್ವಜನಿಕರ ಸಹಕಾರ ಮುಖ್ಯವಾಗಿದೆ. ಅದ್ದರಿಂದ ಸಾರ್ವಜನಿಕರು ಕೆಲ ಕ್ರಮಗಳನ್ನು ಕೈಗೊಳ್ಳುವ ಮೂಲಕ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ಐಶ್ವರ್ಯ ನಾಗರಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಗಣ್ಯರ ಹೆಸರಿನಲ್ಲಿ ಇನ್‌ಸ್ಟಾಗ್ರಾಂ, ಫೇಸ್‌ಬುಕ್ ಮತ್ತಿತರ ಜಾಲತಾಣಗಳಲ್ಲಿ ನಕಲಿ ಖಾತೆಗಳನ್ನು ತೆರೆದು, ಭಾವನಾತ್ಮಕ ಅಥವಾ ಬೆದರಿಕೆ ಕರೆ ಮಾಡಿ ಹಣಕ್ಕೆ ಬೇಡಿಕೆ ಇಡುತ್ತಾರೆ. ಸಾರ್ವಜನಿಕರು ಇದರಿಂದ ಜಾಗರೂಕರಾಗಿರಬೇಕು. ಇದರಿಂದ ಪಾರಾಗಲು ನಿಮ್ಮ ಖಾತೆಯ ಪಾಸ್‌ವರ್ಡ್‌ಗಳನ್ನು ಆಗಾಗ ಬದಲಾಯಿಸುತ್ತಿರಿ. ಇದನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ಯಾವುದೇ ಎಪಿಕೆ ಫೈಲ್ ಅಥವಾ ಸಂಶಯಾತ್ಮಕ ಫೈಲ್‌ನ್ನು ಡೌನ್‌ಲೋಡ್ ಮಾಡಿಕೊಳ್ಳುವಾಗ ಎಚ್ಚರವಿರಲಿ. ಅಪರಿಚಿತ ವ್ಯಕ್ತಿ ಅಥವಾ ವಿದೇಶದಿಂದ ಬರುವ ಯಾವುದೇ ಕರೆಯನ್ನು ಸ್ವೀಕರಿಸದಿರಿ. ಸಿಬಿಐ, ನ್ಯಾಯಾಧೀಶ, ಪೊಲೀಸ್ ಇತ್ಯಾದಿ ಹೆಸರಿನಲ್ಲಿ ವಿಡಿಯೊ ಕರೆ ಮಾಡಿ ಡಿಜಿಟಲ್ ಅರೆಸ್ಟ್ ಮಾಡಿ ಹಣ ಲೂಟಿ ಮಾಡುತ್ತಾರೆ. ಇದನ್ನು ನಂಬದಿರಿ.

ಮನೆಯಲ್ಲಿ ನಗದು ಹಣ, ಆಭರಣಗಳನ್ನು ಇಡದೆ, ಬ್ಯಾಂಕ್ ಲಾಕರ್‌ನಲ್ಲಿಡಿ. ಮನೆಯ ಸುತ್ತಲೂ ರಾತ್ರಿ ದೀಪ ಹಾಕಿ. ಸಾಧ್ಯವಾದಷ್ಟು ಮನೆಗಳಿಗೆ ಸಿಸಿ ಕ್ಯಾಮರಾ ಅಳವಡಿಸಿ. ಪರ ಊರಿಗೆ ಹೊರಟರೆ



ಮನೆಯಲ್ಲಿನ ಲಾಕರ್‌ಗಳಿಗೆ ಬೀಗ ಹಾಕಿರಿ ಬೀಗದ ಕೈಗಳನ್ನು ಜೊತೆಗೆ ಕೊಂಡೊಯ್ಯಿರಿ. ಕಿಟಕಿಗಳಲ್ಲಿ ಬೆಲೆಬಾಳುವ ವಸ್ತುಗಳನ್ನು ಇಟ್ಟು ನಿದ್ರಿಸಬೇಡಿ. ಮುಂದಿನ ಮತ್ತು ಹಿಂದಿನ ಬಾಗಲಿಗೆ ಕಬ್ಬಿಣದ ಗ್ರಿಲ್‌ಗಳನ್ನು ಅಳವಡಿಸಿ. ಗೇಟ್ ಮತ್ತು ಮುಂಬಾಗಿಲಿಗೆ ಕಾಣುವಂತೆ ಬೀಗ ಹಾಕಬೇಡಿ. ಮನೆಯ ಮುಂದೆ ಯಾರಾದರೂ ಅಪರಿಚಿತರು ಓಡಾಡಿದರೆ, ಅನುಮಾನಾಸ್ಪದ ವ್ಯಕ್ತಿಗಳು ಕಂಡುಬಂದರೆ ತಕ್ಷಣ ಪೊಲೀಸ್ ಠಾಣೆಗೆ ಮಾಹಿತಿ ನೀಡಿ. ಮನೆಗೆ ಬೀಗ ಹಾಕಿ ಬೇರೆ ಊರಿಗೆ ಹೋಗುವ ಮುಂಚೆ-9480021100 ಸಂಖ್ಯೆಗೆ ಹೆಲ್ಪ್ ಎಂದು ಮೆಸೇಜ್ ಮಾಡಿ ನಿಮ್ಮ ಮಾಹಿತಿಯನ್ನು ನೀಡಿ. ನಿಮ್ಮ ದ್ವಿಚಕ್ರ ವಾಹನಗಳಿಗೆ ಗುಣಮಟ್ಟದ ಹ್ಯಾಂಡ್‌ಲಾಕ್ ಅಳವಡಿಸಿ. ಅಪರಿಚಿತರಿಂದ ವಾಹನ ಖರೀದಿಸಬೇಡಿ. ಸಾರ್ವಜನಿಕ ಸ್ಥಳದಲ್ಲಿ ವಾಹನ ನಿಲ್ಲಿಸಬೇಕಾದರೆ ಸರಿಯಾದ ಬೆಳಕು, ಸಿಸಿ ಟಿವಿ ಇರುವ ಕಡೆಗಳಲ್ಲಿ ನಿಲ್ಲಿಸಿ. ರಾತ್ರಿ ವೇಳೆ ವಾಹನಗಳನ್ನು ಮನೆಯ ಕಂಪೌಂಡ್ ಹೊರಗೆ ಅಥವಾ ರಸ್ತೆಯ ಮೇಲೆ ನಿಲ್ಲಿಸಬೇಡಿ. ವಾಹನ ಖರೀದಿ ಅಥವಾ ಮಾರಿದ ತಕ್ಷಣ ದಾಖಲೆಗಳ ವರ್ಗಾವಣೆ ಮಾಡಿಕೊಳ್ಳಿ.

ಸಾಮಾಜಿಕ ಜಾಲತಾಣಗಳ ಜಾಹೀರಾತುಗಳಿಗೆ ಮೋಸ ಹೋಗಬೇಡಿ. ಯಾವುದಾದರೂ ಆಮಿಷಗಳಿಗೆ ಬಲಿ ಬೀಳಬೇಡಿ. ವರ-ಕನ್ಯೆ ಹುಡುಕಿಕೊಡುವ ನಕಲಿ ಜಾಲತಾಣಗಳು ಸಾಕಷ್ಟಿವೆ. ಅವುಗಳಿಗೆ ಬಲಿಯಾಗಬೇಡಿ. ನಿಮಗೆ ಬಂದಿರುವ ಒಟಿಪಿ, ಸಿವಿವಿ, ಪಿನ್ ಇತರೆ ಯಾವುದೇ ಮಾಹಿತಿಯನ್ನು ಹಂಚಿಕೊಳ್ಳಬೇಡಿ. ಎಟಿಎಂ ಕಾರ್ಡ್ ಬಳಸುವಾಗ, ಆನ್‌ಲೈನ್ ಶಾಪಿಂಗ್ ಮಾಡುವಾಗ ಎಚ್ಚರವಾಗಿರಿ. ಸೈಬರ್ ವಂಚನೆಗೆ ಒಳಗಾದಲ್ಲಿ ತಕ್ಷಣ 1930ಗೆ ಕರೆ ಮಾಡಿ ದೂರು ಸಲ್ಲಿಸಿ ಎಂದು ಪಿಎಸ್‌ಐ ಐಶ್ವರ್ಯ ನಾಗರಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಭರಣಗಳನ್ನು ಧರಿಸಿಕೊಂಡು ಹೊರಹೋಗುವುದನ್ನು ಕಡಿಮೆ ಮಾಡಿ. ನಿರ್ಜನ ಪ್ರದೇಶದಲ್ಲಿ ವಾಕಿಂಗ್ ಹೋಗಬೇಡಿ, ಅಪರಿಚತರಿಗೆ ವಿಳಾಸ ಹೇಳಲು ಹೋಗಬೇಡಿ. ಸಾಧ್ಯವಾದರೆ ಅಪರಿಚಿತರ ವಾಹನದ ನಂಬರ್‌ಗಳನ್ನು ಗುರುತಿಸಿಕೊಳ್ಳಿ. ಬೆಳ್ಳಿ, ಬಂಗಾರಗಳನ್ನು ತೊಳೆದುಕೊಡುವುದಾಗಿ ಹೇಳಿದರೆ ನಂಬಬೇಡಿ. ಅಪರಿಚಿತರಿಗೆ ಮನೆಯನ್ನು ಬಾಡಿಗೆ ನೀಡಬೇಡಿ. ಬಾಡಿಗೆದಾರರ ವೋಟರ್ ಐಡಿ ಅಥವಾ ಆಧಾರ ಕಾರ್ಡ್ ಜೆರಾಕ್ಸ್ ನಿಮ್ಮ ಬಳಿಯಿರಲಿ. ಬಾಡಿಗೆದಾರರ ಪೂರ್ವಾಪರಗಳನ್ನು ತಿಳಿದುಕೊಳ್ಳಿ ಮತ್ತು ಸರಿಯಾದ ಒಪ್ಪಿಗೆ ಪತ್ರವನ್ನು ಮಾಡಿಟ್ಟುಕೊಳ್ಳಿ. ಈ ಮುಂತಾದ ಕೆಲವು ಮುನ್ನೆಚ್ಚರಿಕೆಗಳನ್ನು ಕೈಗೊಳ್ಳುವ ಮೂಲಕ ಸಾರ್ವಜನಿಕರು ಸಹಕರಿಸಬೇಕೆಂದು ಪಿಎಸ್‌ಐ ನಾಗರಾಳ ತಿಳಿಸಿದ್ದಾರೆ.

# ರಿಯಾಯಿತಿ ದರದಲ್ಲಿ ಕಡಲೆ ಬೀಜ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸರಕಾರ ರೈತರ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ರೈತರು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗ್ರಾ.ಪಂ ಸದಸ್ಯ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ-2ರ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ ಹೇಳಿದರು.

ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಂ 2ರಲ್ಲಿ ಕೃಷಿ ಇಲಾಖೆಯಿಂದ ಒದಗಿಸಲಾದ ಹಿಂಗಾರಿ ಹಂಗಾಮಿನಲ್ಲಿ ಬಿತ್ತುವ ಕಡಲೆ ಮತ್ತು ಜೋಳದ ಬೀಜವನ್ನು ವಿತರಿಸಿ ಮಾತನಾಡಿದರು.

ನಮ್ಮ ಸಂಘವು ರೈತೋಪಯೋಗಿ ಕಾರ್ಯಗಳನ್ನು ಮಾಡುತ್ತಿದ್ದು, ಪ್ರತಿ ವರ್ಷ ಮುಂಗಾರು ಮತ್ತು ಹಿಂಗಾರಿನಲ್ಲಿ ಕೃಷಿ ಇಲಾಖೆಯ ಸಹಕಾರದೊಂದಿಗೆ ಬಿತ್ತನೆಯ ಬೀಜಗಳನ್ನು ರಿಯಾಯತಿ ದರದಲ್ಲಿ ವಿತರಿಸಲಾಗುತ್ತಿದೆ. ಬೆಂಬಲ ಬೆಲೆಯ ಕಡಲೆ ಖರೀದಿ ಕೇಂದ್ರವನ್ನು ಸಹ ತೆರೆಯಲಾಗುತ್ತಿದ್ದು, ಮುಂದಿನ ವರ್ಷದಿಂದ ರಾಸಾಯನಿಕ, ಸಾವಯವ ಗೊಬ್ಬರವನ್ನು ಸಹ ಮಾರಾಟ ಮಾಡಲು ಕ್ರಮ ವಹಿಸಲಾಗುತ್ತದೆ ಎಂದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೆಣಕಲ್ಲ ಮಾತನಾಡಿ, ಹಿಂಗಾರು ಹಂಗಾಮಿನ ಕಡಲೆ ಮತ್ತು ಜೋಳದ ಬೀಜವನ್ನು ವಿತರಿಸಲಾಗುತ್ತಿದೆ. ರಿಯಾಯತಿ ದರದಲ್ಲಿ ದೊರೆಯುವ ಬಿತ್ತನೆ ಬೀಜ ಖರೀದಿಗೆ ಜಮೀನಿನ ಪಹಣಿ ಪತ್ರ, ಆಧಾರ್ ಕಾರ್ಡ್, ಎಫ್.ಐ.ಡಿ ಸಂಖ್ಯೆ ಹಾಗೂ ಎಸ್.ಸಿ/ಎಸ್.ಟಿ ರೈತರು ಇವುಗಳೊಂದಿಗೆ ಜಾತಿ ಪ್ರಮಾಣ ಪತ್ರವನ್ನು ನೀಡಿ ಬೀಜವನ್ನು ಖರೀದಿ ಮಾಡಬೇಕು ಎಂದು ವಿವರಿಸಿದರು.

ಬೆಟಗೇರಿ ರೈತ ಸಂಪರ್ಕ ಕೇಂದ್ರದ ಅಧಿಕಾರಿ ರಮೇಶ ಜಟ್ಟಿ ಕೃಷಿ ಇಲಾಖೆಯಿಂದ ರಿಯಾಯತಿ ದರದಲ್ಲಿ ಸಿಗುವ ಬೀಜ, ಗೊಬ್ಬರ, ಕೃಷಿ ಪರಿಕರಗಳ ಕುರಿತು ವಿವರಿಸಿದರು.

ಸಂಘದ ನಿರ್ದೇಶಕರಾದ ಮಲ್ಲನಗೌಡ ಪಾಟೀಲ, ರಾಚಪ್ಪ ನಾಲ್ವಾಡದ ಕಲ್ಲಪ್ಪ ಬೆಟಗೇರಿ, ಗವಿಶಿದ್ದಪ್ಪ ರೇವಡಿ, ಶಂಕ್ರಪ್ಪ ಕುಂಬಾರ, ಅಂದಾನಯ್ಯ ಪತ್ರಿಮಠ, ಫಕ್ಕೀರಯ್ಯ ಪತ್ರಿಮಠ, ನೀಲವ್ವ ರವದಿ, ಅನ್ನಪೂರ್ಣವ್ವ ಹಡಗಲಿ, ಸಕ್ರಪ್ಪ ರಾಮತಾಳ ಇದ್ದರು.

# ರಾಷ್ಟ್ರೀಯ ಯೋಗಾಸನ ಚಾಂಪಿಯನ್‌ಶಿಪ್‌ಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಯೋಗ ಫೆಡರೇಶನ್ ಆಫ್ ಇಂಡಿಯಾ ಪಂಚಕುಲ (ಹರ್ಯಾಣ) ಇವರು ಕರ್ನಾಟಕ ರಾಜ್ಯ ಅಮೇಚೂರ್ ಯೋಗ ಸ್ಪೋರ್ಟ್ಸ್ ಅಸೋಶಿಯೇಷನ್ ಬೆಂಗಳೂರು, ವಿವೇಕಾನಂದ ಯೋಗ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ, ಯೋಗ ಸ್ಪೋರ್ಟ್ಸ್ ಫೌಂಡೇಶನ್, ಗ್ಲೋಬಲ್ ಫೋರಂ ಮೈಸೂರು ಇವರುಗಳ ಸಹಯೋಗದಲ್ಲಿ 9-10-2025ರಿಂದ 12-10-2025ರವರೆಗೆ ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ನಡೆಯಲಿರುವ 50ನೇ ಹಿರಿಯರ ರಾಷ್ಟ್ರೀಯ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಗಳಲ್ಲಿ ಕರ್ನಾಟಕ ರಾಜ್ಯ ತಂಡದಿಂದ



ಭಾಗವಹಿಸಲು ಗದಗ ಜಿಲ್ಲೆಯಿಂದ ಯಶವಂತ ಮತ್ತೂರ (45 ವರ್ಷ ಮೇಲ್ಪಟ್ಟ ಪುರುಷರ ವಿಭಾಗ) ಸಂಜನಾ ವಾಯ್.ಸಜ್ಜನರ (21 ರಿಂದ 25 ವರ್ಷದ ಮಹಿಳೆಯರ ವಿಭಾಗ) ಮತ್ತು ಕೆ.ಎಸ್. ಪಲ್ಲೇದ (30 ವರ್ಷ ಮೇಲ್ಪಟ್ಟ ಪ್ರೊಫೆಶನಲ್ (ರೆಫ್ರಿ) ವಿಭಾಗ) ಇವರು ರಾಜ್ಯಮಟ್ಟದಲ್ಲಿ ಸ್ಥಾನ ಗಳಿಸಿ ಆಯ್ಕೆಯಾಗಿದ್ದಾರೆ.

50ನೇ ರಾಷ್ಟ್ರೀಯ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಗೆ ಆಯ್ಕೆಯಾಗಿರುವ ಯೋಗಾಸನ ಕ್ರೀಡಾಪಟುಗಳಿಗೆ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷರಾದ ಎಂ.ಎಸ್. ಶಿರಿಯಣ್ಣವರ, ಸದಸ್ಯರಾದ ಡಾ. ಎಂ.ವ್ಹಿ. ಐಹೊಳ್ಳಿ, ಐ.ಬಿ. ಕೊಟ್ಟೂರಶೆಟ್ಟಿ, ವ್ಹಿ.ಎಂ. ಮುಂದಿನಮನಿ, ವಿಜಯಲಕ್ಷ್ಮೀ ಆನೆಹೊಸೂರ, ಸುನಂದಾ ಜ್ಯಾನೋಪಂತರ ಮುಂತಾದವರು ಶುಭ ಹಾರೈಸಿದ್ದಾರೆ.

# ಹೆಂಡತಿ ಕಿರುಕುಳ ತಾಳಲಾರದೇ ಆತ್ಮಹತ್ಯೆಗೆ ಯತ್ನಿಸಿದ ಪತಿ

■ ವಿಜಯಸಾಕ್ಷಿ ಸುದ್ದಿ, ತುಮಕೂರು



ತುಮಕೂರಿನ ಜಯನಗರ ಠಾಣಾ ವ್ಯಾಪ್ತಿಯಲ್ಲಿ ಹೆಂಡತಿ ಕಿರುಕುಳ ತಾಳಲಾರದೇ ಪತಿಯೋರ್ವ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಜರುಗಿದೆ. ಸಲ್ಮಾನ್ ಪಾಷಾ ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿ. ಜಿಲ್ಲಾಸ್ಪತ್ರೆಗೆ ದಾಖಲಿಸಿ ಆತನಿಗೆ ಚಿಕಿತ್ಸೆ ನೀಡಲಾಗ್ತಿದೆ. ಕಳೆದ ನಾಲ್ಕು ವರ್ಷಗಳ ಹಿಂದೆ ಸೈಯದ್ ನಿಕತ್ ಫಿರ್ದೋಸ್ ಎಂಬಾಕೆ ಜೊತೆ ಸಲ್ಮಾನ್ ಪಾಷಾ ವಿವಾಹ ನಡೆದಿತ್ತು.

ಮದುವೆ ನಂತರ ಎರಡು ವರ್ಷ ಸುಖ ಸಂಸಾರವನ್ನೂ ನಡೆಸಿದ್ದರು. ಪತ್ನಿ ಎರಡನೇ ಮಗುವಿನ ಗರ್ಭಿಣಿಯಾದಾಗ ಸಲ್ಮಾನ್ ಗೆ ಕುವೈತ್ ನಲ್ಲಿ ಹೈಡ್ರಾಲಿಕ್ ಮೆಕಾನಿಕ್ ಆಗಿ ಕೆಲಸ ಸಿಕ್ಕಿದೆ. ಹೀಗಾಗಿ ಆತ ವಿದೇಶಕ್ಕೆ ತೆರಳಿದ ಬಳಿಕ ಸೈಯದ್ ನಿಕತ್ ಫಿರ್ದೋಸ್ ತಾಯಿ ಮನೆಗೆ ತೆರಳಿದ್ದಾರೆ. ಆ ಬಳಿಕ ಸಂಸಾರದಲ್ಲಿ ಬಿರುಕು ಮೂಡಿದೆ ಎನ್ನಲಾಗಿದೆ. AIMIM ಪಕ್ಷದ ತುಮಕೂರು ಜಿಲ್ಲಾಧ್ಯಕ್ಷನಾಗಿರುವ ಸೈಯದ್ ಬುರ್ಹಾನ್ ಉದ್ದೀನ್ ಜೊತೆ ಸೇರಿ ಪತ್ನಿ ಹೆಚ್ಚಿನ ಹಣಕ್ಕಾಗಿ ತನ್ನ ಪೀಡಿಸುತ್ತಿದ್ದಾಳೆ.

ಜೊತೆಗೆ ಆಕೆಗೆ ಬುರ್ಹಾನ್ ಜೊತೆ ಅಕ್ರಮ ಸಂಬಂಧ ಇದ್ದು, ವಿದೇಶಿ ಕೆಲಸ ಬಿಟ್ಟು ತುಮಕೂರಿಗೆ ಬಂದರೂ ಇಬ್ಬರು ಮಕ್ಕಳನ್ನ ತೋರಿಸುತ್ತಿಲ್ಲ. ಹಣ ಕೊಡದಿದ್ದರೆ ವಿಚ್ಛೇದನ ನೀಡು ಎಂದು ಪತ್ನಿ ಹೇಳುತ್ತಿದ್ದು, ತುಮಕೂರು ಮಹಿಳಾ ಠಾಣೆ ಪೊಲೀಸರು ಸಹ ಹೆಂಡತಿ ಕುಟುಂಬಕ್ಕೆ ಬೆಂಬಲ ನೀಡುತ್ತಿದ್ದಾರೆ ಎನ್ನುವುದು ಸಲ್ಮಾನ್ ಪಾಷಾ ಆರೋಪವಾಗಿದೆ.


ಇನ್ನು ಗಂಡನ ಆರೋಪಗಳಿಗೆ ಪತ್ನಿ ಸೈಯದ್ ನಿಕತ್ ಫಿರ್ದೋಸ್ ಪ್ರತಿಕ್ರಿಯೆ ನೀಡಿದ್ದು, ಈ ಹಿಂದೆ ಸೋಪಿನ ನೀರು ಕುಡಿದು ಸಲ್ಮಾನ್ ಡ್ರಾಮಾ ಮಾಡಿದ್ದ. ನಾನು ಕೆಲಸ ಮಾಡುವ ಜಾಗಕ್ಕೆ ಬಂದು ಆ್ಯಸಿಡ್ ಹಾಕುತ್ತೇನೆಂದು ಬೆದರಿಕೆ ಹಾಕಿದ್ದ. ಈ ಬಗ್ಗೆ ನಾನು ದೂರು ಸಹ ಕೊಟ್ಟಿದ್ದೆ ಎಂದು ಮರು ಆರೋಪ ಮಾಡಿದ್ದಾರೆ.

# 'ಇಸ್ಲಾಮೋಫೋಬಿಕ್' ವಿಡಿಯೋ: ಅಸ್ಸಾಂ ಬಿಜೆಪಿಗೆ ಸುಪ್ರೀಂ ಕೋರ್ಟ್ ನೋಟಿಸ್

■ ವಿಜಯಸಾಕ್ಷಿ ಸುದ್ದಿ, ಅಸ್ಸಾಂ

ಬಿಜೆಪಿ ಅಸ್ಸಾಂ ರಾಜ್ಯದ ಘಟಕದ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಲಾದ ಎಐ ಆಧಾರಿತ 'ಇಸ್ಲಾಮೋಫೋಬಿಕ್' ವಿಡಿಯೋವನ್ನು ತೆಗೆದು ಹಾಕಲು ನಿರ್ದೇಶಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗೆ ಸಂಬಂಧಿಸಿದಂತೆ ಅಸ್ಸಾಂ ಬಿಜೆಪಿ, ಅಸ್ಸಾಂ ಸರ್ಕಾರ ಮತ್ತು ಕೇಂದ್ರ ಸರ್ಕಾರಕ್ಕೆ ಮಂಗಳವಾರ (ಅ.7) ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದೆ.

ಅರ್ಜಿದಾರ ಅಡ್ವೋಕೇಟ್ ಲರ್ಖೀಫ್ ಅಹ್ಮದ್ ಪರ ವಕೀಲ ನಿಝಾಮ್ ಪಾಷಾ ಅವರ ವಾದವನ್ನು ಆಲಿಸಿದ ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠವು ನೋಟಿಸ್ ಜಾರಿ ಮಾಡಿದೆ.




"ಮುಂಬರುವ ಚುನಾವಣೆಯ ಭಾಗವಾಗಿ ಒಂದು ವಿಡಿಯೋವನ್ನು ಪೋಸ್ಟ್ ಮಾಡಲಾಗಿದೆ. ಒಂದು ನಿರ್ದಿಷ್ಟ ರಾಜಕೀಯ ಪಕ್ಷ ಅಧಿಕಾರಕ್ಕೆ ಬರದಿದ್ದರೆ, ಒಂದು ನಿರ್ದಿಷ್ಟ ಸಮುದಾಯವು ಅಧಿಕಾರ ವಹಿಸಿಕೊಳ್ಳುತ್ತದೆ ಎಂದು ಅದರಲ್ಲಿ ತೋರಿಸಲಾಗಿದೆ. ಟೋಪಿ ಮತ್ತು ಗಡ್ಡ ಬಿಟ್ಟ ಜನರನ್ನು ವಿಡಿಯೋದಲ್ಲಿ ತೋರಿಸಲಾಗಿದೆ. ಹಾಗಾಗಿ, ವಿಡಿಯೋ ಪೋಸ್ಟ್ ಮಾಡಿದವರ ವಿರುದ್ಧ ಸ್ವಯಂಪ್ರೇರಿತವಾಗಿ ಎಫ್‌ಐಆರ್ ದಾಖಲಿಸಬೇಕು. ಎಫ್‌ಐಆರ್ ದಾಖಲಿಸದಿದ್ದರೆ, ನ್ಯಾಯಾಂಗ ನಿಂದನೆ ಕ್ರಮ ಕೈಗೊಳ್ಳಬೇಕು" ಎಂದು ಅರ್ಜಿದಾರರ ಪರ ವಕೀಲ ಮನವಿ ಮಾಡಿದ್ದರು.

ಮನವಿ ಆಲಿಸಿದ ನ್ಯಾಯಪೀಠ ಪ್ರಕರಣದ ವಿಚಾರಣೆಯನ್ನು ಅಕ್ಟೋಬರ್ 28ಕ್ಕೆ ನಿಗದಿಪಡಿಸಿದೆ.

ಬಿಜೆಪಿ ಅಸ್ಸಾಂ ಘಟಕ ಸೆಪ್ಟೆಂಬರ್ 15ರಂದು ತನ್ನ ಎಕ್ಸ್ ಖಾತೆಯಲ್ಲಿ ವಿಡಿಯೋವೊಂದನ್ನು ಪೋಸ್ಟ್ ಮಾಡಿದೆ. ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿ ಉಳಿಯದಿದ್ದರೆ ಅಸ್ಸಾಂ ಅನ್ನು ಮುಸ್ಲಿಮರು ವಶಪಡಿಸಿಕೊಳ್ಳುತ್ತಾರೆ ಎಂಬ 'ಸುಳ್ಳು ನಿರೂಪಣೆ'ಯನ್ನು ಇದರಲ್ಲಿ ಮಾಡಲಾಗಿದೆ.


# ತನ್ನ ಇಬ್ಬರು ಮಕ್ಕಳಿಗೆ ವಿಷ ನೀಡಿ ತಾನೂ ಆತ್ಮಹತ್ಯೆಗೆ ಶರಣಾದ ಕ್ಯಾನ್ಸರ್ ರೋಗಿ

■ ವಿಜಯಸಾಕ್ಷಿ ಸುದ್ದಿ, ಗುಜರಾತ್

ಗುಜರಾತ್‌ನ ದೇವಭೂಮಿ ದ್ವಾರಕಾ ಜಿಲ್ಲೆಯಲ್ಲಿ ಕ್ಯಾನ್ಸರ್‌ನಿಂದ ಬಳಲುತ್ತಿದ್ದ 40 ವರ್ಷದ ವ್ಯಕ್ತಿಯೊಬ್ಬ ತನ್ನ ಇಬ್ಬರು ಅಪ್ರಾಪ್ತ ಮಕ್ಕಳಿಗೆ ವಿಷಪ್ರಾಶನ ಮಾಡಿ ನಂತರ ತಾನೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ವರದಿಯಾಗಿದೆ.

ಸೋಮವಾರ ಸಂಜೆ ಲಂಬಾ ಗ್ರಾಮದಲ್ಲಿ ಈ ಘಟನೆ ನಡೆದಿದೆ ಎಂದು ಕಲ್ಯಾಣಪುರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಟಿಸಿ ಪಟೇಲ್ ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಮೆರಾಮನ್ ಭಾಯ್ ಎಂದು ಗುರುತಿಸಲ್ಪಟ್ಟ ವ್ಯಕ್ತಿ ಕಳೆದ ಐದು ವರ್ಷಗಳಿಂದ ಬಾಯಿಯ ಕ್ಯಾನ್ಸರ್‌ನಿಂದ ಬಳಲುತ್ತಿದ್ದರು, ಈಗ ರೋಗವು ಅಂತಿಮ ಹಂತದಲ್ಲಿತ್ತು. ಅವರ ಆರೋಗ್ಯ ಹದಗೆಟ್ಟಿದ್ದರಿಂದ



ಅವರು ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಚಿಂತಿತರಾಗಿದ್ದರು ಎಂದು ವರದಿಯಾಗಿದೆ.

"ಮೆರಾಮನ್ ಚೆಟ್ರಿಯಾ ಎಂಬ ವ್ಯಕ್ತಿ ಕಳೆದ ಐದು ವರ್ಷಗಳಿಂದ ಕ್ಯಾನ್ಸರ್‌ನಿಂದ ಬಳಲುತ್ತಿದ್ದರಿಂದ, ಅವರ ಸಾವನ್ನು ದಿಟ್ಟಿಸಿ ನೋಡುತ್ತಿದ್ದರಿಂದ ಅವರು ತಮ್ಮ ಜೀವನವನ್ನು ಕೊನೆಗೊಳಿಸಲು ನಿರ್ಧರಿಸಿದರು. ಅವರ ಮರಣದ ನಂತರ ಅವರ ಚಿಕ್ಕ ಮಕ್ಕಳ ಭವಿಷ್ಯದ ಬಗ್ಗೆ ಅವರು ನಿರಂತರವಾಗಿ ಚಿಂತಿತರಾಗಿದ್ದರು" ಎಂದು ಪೊಲೀಸ್ ಅಧಿಕಾರಿ ಹೇಳಿದರು.

ಚೆಟಾರಿಯಾ ತಮ್ಮ 5 ವರ್ಷದ ಮಗಳು ಖುಷಿ ಮತ್ತು ಮೂರು ವರ್ಷದ ಮಗ ಮಾಧವ್‌ಗೆ ವಿಷಪ್ರಾಶನ ಮಾಡಿ, ನಂತರ ಸ್ವತಃ ತಮ್ಮ ಮನೆಯಲ್ಲಿ ವಿಷಪ್ರಾಶನ ಮಾಡಿದರು. ಆ ಸಮಯದಲ್ಲಿ ಅವರ ಪತ್ನಿ ಕೆಲಸಕ್ಕೆ ಹೋಗಿದ್ದರು. ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ತನಿಖೆ ನಡೆಯುತ್ತಿದೆ.

# ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ: ಅ.18ರವರೆಗೆ ಸರ್ಕಾರಿ, ಅನುದಾನಿತ ಶಾಲೆಗಳಿಗೆ ರಜೆ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಿಗದಿತ ಅವಧಿಯಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಪೂರ್ಣಗೊಳ್ಳದ ಹಿನ್ನೆಲೆ, ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಅಕ್ಟೋಬರ್ 18ರವರೆಗೆ ರಜೆ ವಿಸ್ತರಣೆ ಮಾಡಲಾಗಿದೆ.

ಸಮೀಕ್ಷೆಯ ಸ್ಥಿತಿಗತಿ ಕುರಿತಂತೆ ಅಧಿಕಾರಿಗಳ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ (ಅ.7) ವಿಡಿಯೋ ಕಾನ್ಫರೆನ್ಸ್ ನಡೆಸಿ ಚರ್ಚಿಸಿದರು.



ಬಳಿಕ ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಿಎಂ, ಸೆಪ್ಟೆಂಬರ್ 22ರಿಂದ ರಾಜ್ಯದ ಜನರ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಶುರುವಾಗಿದೆ. ಸಮೀಕ್ಷೆ ಇಂದು (ಅ.7) ಮುಗಿಯಬೇಕಿತ್ತು. ಆದರೆ, ಕೆಲ ಜಿಲ್ಲೆಗಳಲ್ಲಿ ಪೂರ್ಣಗೊಂಡಿಲ್ಲ. ಕೊಪ್ಪಳ ಜಿಲ್ಲೆಯಲ್ಲಿ ಶೇಕಡ 97ರಷ್ಟು ಸಮೀಕ್ಷೆ ಆಗಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇಕಡ 67ರಷ್ಟು ಮಾತ್ರ ಪೂರ್ಣಗೊಂಡಿದೆ. ಶಿಕ್ಷಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಆಯೋಗದವರು ಪರಸ್ಪರ ಚರ್ಚೆ ನಡೆಸಿದ್ದಾರೆ. 1 ಲಕ್ಷದ 20 ಸಾವಿರ ಶಿಕ್ಷಕರು ಸೇರಿ 1 ಲಕ್ಷದ 60 ಸಾವಿರ ಸಿಬ್ಬಂದಿ ಸಮೀಕ್ಷೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ತಿಳಿಸಿದರು. ವಿಧಾನಪರಿಷತ್ ಸದಸ್ಯ ಪುಟ್ಟಣ್ಣ ಮತ್ತು ಶಿಕ್ಷಕರ ಸಂಘದವರು ಹೆಚ್ಚುವರಿಯಾಗಿ 10 ದಿನಗಳ ಕಾಲಾವಕಾಶ ಕೇಳಿ ಮನವಿ ಮಾಡಿದ್ದಾರೆ. ಈ ಮನವಿ ಪುರಸ್ಕರಿಸಿ ಅಕ್ಟೋಬರ್ 18ರವರೆಗೆ (8 ಕೆಲಸದ ದಿನಗಳು) ಸರ್ಕಾರಿ, ಅನುದಾನಿತ ಶಾಲೆಗಳಿಗೆ ರಜೆ ವಿಸ್ತರಿಸಿದ್ದೇವೆ ಎಂದು ಹೇಳಿದರು.

ಇದೇ 12ನೇ ತಾರೀಕಿನಿಂದ ದ್ವಿತೀಯ ಪಿಯುಸಿ ಮಧ್ಯಂತರ ಪರೀಕ್ಷೆ ಶುರುವಾಗಲಿದೆ. ಹಾಗಾಗಿ, ಸಮೀಕ್ಷೆ ಕಾರ್ಯದಿಂದ ಪಿಯುಸಿ ಉಪನ್ಯಾಸಕರಿಗೆ ವಿನಾಯಿತಿ ನೀಡಲಾಗಿದೆ ಎಂದು ಸಿಎಂ ಹೇಳಿದರು. ಬೆಂಗಳೂರು ನಗರದಲ್ಲಿ 6,700 ಮಂದಿ ಶಿಕ್ಷಕರು ಸಮೀಕ್ಷೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ 46 ಲಕ್ಷ ಮನೆಗಳಿವೆ. ದಿನಕ್ಕೆ 10-15 ಮನೆಗಳ ಸಮೀಕ್ಷೆ ನಡೆಸುವ ಗುರಿ ನೀಡಲಾಗಿದೆ. ಬೆಂಗಳೂರಿನಲ್ಲಿ ನರಕ ಚತುರ್ದಶಿ ಒಳಗೆ ಸಮೀಕ್ಷೆ ಮುಗಿಸಲು ಸೂಚಿಸಲಾಗಿದೆ. ಶಿಕ್ಷಕರು ಕೂಡ ಇಷ್ಟರೊಳಗೆ ಸಮೀಕ್ಷೆ ಮುಗಿಸುವ ಭರವಸೆ ನೀಡಿದ್ದಾರೆ ಎಂದರು.

ಸಮೀಕ್ಷೆ ನಡೆಯುವಾಗ ಮೂವರು ಶಿಕ್ಷಕರು ಮೃತಪಟ್ಟಿದ್ದಾರೆ. ಇವರಿಗೆ ತಲಾ 20 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಸಮೀಕ್ಷೆಯಲ್ಲಿ ತೊಡಗಿಸಿಕೊಳ್ಳಲು ಒಪ್ಪದ, ಹಿಂದೇಟು ಹಾಕುವವರ ವಿರುದ್ಧ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ ತಡವಾಗಿ ಸಮೀಕ್ಷೆ ಶುರುವಾಗಿದೆ. ಚುನಾವಣಾ ಆಯೋಗದ ಕೆಲಸ ಮತ್ತು ಇತರೆ ತರಬೇತಿ ಇದ್ದಿದ್ದರಿಂದ ತಡವಾಗಿದೆ. ಆದ್ದರಿಂದ ಜಿಬಿಎ ವ್ಯಾಪ್ತಿಯಲ್ಲಿ ಸಮೀಕ್ಷೆ ಪ್ರಮಾಣ ಕಡಿಮೆ ಇದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

# ಬಿತ್ತನೆ ಬೀಜ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂಗಾರು ಬಿತ್ತನೆಗಾಗಿ ಕೃಷಿ ಇಲಾಖೆಯಿಂದ ಬಂದಿರುವ ರಿಯಾಯಿತಿ ದರದ ಕಡಲೆ ಬಿತ್ತನೆ ಬೀಜವನ್ನು ಸೋಮವಾರ ಶಾಸಕ ಡಾ. ಚಂದ್ರು ಲಮಾಣಿ ರೈತರಿಗೆ ವಿತರಿಸಿದರು.

ಈ ವೇಳೆ ಮಾತನಾಡಿದ ಅವರು, ಈ ವರ್ಷದ ಅತಿವೃಷ್ಟಿಗೆ ಮುಂಗಾರು ಹಂಗಾಮಿನ ಹೆಸರು, ಈರುಳ್ಳಿ, ಬೆಳ್ಳುಳ್ಳಿ, ಮೆಣಸಿನಕಾಯಿ ಬೆಳೆಗಳು ಹಾಳಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಹಿಂಗಾರು ಬೆಳೆಗಳಾದರೂ ಚೆನ್ನಾಗಿ ಬರುತ್ತವೆ ಎಂಬ ಆಶೆಯಿಂದ ರೈತರು ಬಿತ್ತನೆಗೆ ಮುಂದಾಗಿದ್ದಾರೆ. ಮುಂಗಾರು ಬೆಳೆ ಕಳೆದುಕೊಂಡು ಪರಿತಪಿಸುತ್ತಿರುವ ರೈತರಿಗೆ ಸರ್ಕಾರ ಆದಷ್ಟು ಬೇಗ ಬೆಳೆ ಹಾನಿ ಮತ್ತು ಬೆಳೆ ವಿಮೆ ಪರಿಹಾರ ಕೊಟ್ಟು ರೈತರ ಹಿತ ಕಾಪಾಡಬೇಕು ಎಂದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರೇವಣೆಪ್ಪ ಮನಗೂಳಿ ಮಾತನಾಡಿ, ರಿಯಾಯಿತಿ ದರದಲ್ಲಿ ರೈತರಿಗೆ ವಿತರಿಸಲು ಸಧ್ಯ 649 ಕ್ವಿಂಟಾಲ್ ಕಡಲೆ ಮತ್ತು 19.80 ಕ್ವಿಂಟಾಲ್ ಬಿಳಿ ಜೋಳದ ಬಿತ್ತನೆ ಬೀಜಗಳ ದಾಸ್ತಾನಿದೆ. ರೈತರು ಅಗತ್ಯ ದಾಖಲೆಗಳನ್ನು ಸಲ್ಲಿಸಿ ಬೀಜ ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಬಸಣ್ಣ ಹಂಜಿ, ವಿ.ಜಿ. ಪಡಿಗೇರಿ, ನಿಂಗಪ್ಪ ಬನ್ನಿ, ಅಶೋಕ ನೀರಾಲೋಟಿ, ರಮೇಶ ಉಪನಾಳ, ಪಿ.ಕೆ. ಹೊನ್ನಪ್ಪನವರ ಮುಂತಾದವರು ಇದ್ದರು.

## ಅಲಗಿಲವಾಡ ಶಾಲೆಯಲ್ಲಿ ವಾಲ್ಮೀಕಿ ಜಯಂತಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಧಾನ ಗುರುಗಳಾದ ಹಾಲೇಶ ಎಸ್.ಜಕ್ಕಲಿ ಮಾತನಾಡಿ, ನಾವು ಮಾಡುವ ಕಾರ್ಯಗಳು ಸಮಾಜದ ಒಳಿತಿಗಾಗಿ ಇರಬೇಕು. ನಾವು ಯಾವಾಗಲೂ ಒಳ್ಳೆಯದನ್ನೇ ಮಾಡಬೇಕು. ನಿಮ್ಮಲ್ಲಿ ಅದ್ವಿತೀಯ ಜ್ಞಾನವಿದ್ದು, ಅದರ ಸದ್ಬಳಕೆಯಾಗಬೇಕು. ಮಹರ್ಷಿ ವಾಲ್ಮೀಕಿಯವರ ಜನನ ದಿನಾಂಕದ ಬಗ್ಗೆ ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲದಿದ್ದರೂ ಸುಮಾರು ಕ್ರಿ.ಪೂ 500 ಎಂದು ಅಂದಾಜಿಸಲಾಗಿದ್ದು, ಮಹರ್ಷಿಗಳು ಚಂದ್ರನಂತೆ ಹೊಳಪುಳ್ಳವರಾಗಿದ್ದರು. ಅದಕ್ಕಾಗಿ ಆಶ್ವೀಜ ಮಾಸದ ಶೀಗೆ ಹುಣ್ಣಿಮೆ ದಿವಸ ಇವರ ಜಯಂತಿ ಆಚರಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ವಿದ್ಯಾರ್ಥಿಗಳು, ಗ್ರಾಮದ ಗುರು-ಹಿರಿಯರು ಭಾಗವಹಿಸಿದ್ದರು.

### ತಹಸೀಲ್ದಾರ ಕಚೇರಿಯಲ್ಲಿ ನಡೆದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ವಾಲ್ಮೀಕಿಯವರ ವಿಚಾರಗಳು ಇಂದಿಗೂ ಪ್ರಸ್ತುತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹರ್ಷಿ ವಾಲ್ಮೀಕಿ ಓರ್ವ ಮಹಾನ್ ಕವಿ. ಅವರು ಸಂಸ್ಕೃತ ಭಾಷೆಯಲ್ಲಿ ರಾಮಾಯಣ ಮಹಾಕಾವ್ಯವನ್ನು ರಚಿಸಿದರು. ಇದರಲ್ಲಿ ಭಗವಾನ್ ಶ್ರೀ ರಾಮನ ಸಂಪೂರ್ಣ ಜೀವನಶೈಲಿಯನ್ನು ಜಗತ್ತಿಗೇ ತೋರಿಸಿಕೊಟ್ಟ ಮಹರ್ಷಿ ವಾಲ್ಮೀಕಿಯವರ ಜೀವನ ನಮ್ಮ ಸಮಾಜಕ್ಕೆ ಒಂದು ಪಾಠವಿದ್ದಂತೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಮಂಗಳವಾರ ತಾಲೂಕಾಡಳಿತ ಹಾಗೂ ವಾಲ್ಮೀಕಿ ಸಮಾಜ ಬಾಂಧವರಿಂದ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯಲ್ಲಿ ಪಾಲ್ಗೊಂಡು ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.



ಸಮಾಜದ ಹಿರಿಯ ಮುಖಂಡ ಎನ್.ಎನ್. ನೆಗಳೂರ ಮಾತನಾಡಿ, ಜಗತ್ತಿಗೆ ರಾಮಾಯಣದಂತಹ ಮಹಾನ್ ಕಾವ್ಯವನ್ನು ಕೊಡುಗೆ ನೀಡಿದ ಕೀರ್ತಿ ಮಹರ್ಷಿ ವಾಲ್ಮೀಕಿ ಅವರಿಗೆ ಸಲ್ಲುತ್ತದೆ. ಕಾಡಿನಲ್ಲಿ ಬೇಟೆಯಾಡುತ್ತಾ ಜೀವನ ಸಾಗಿಸುತ್ತಿರುವ ಸಂದರ್ಭದಲ್ಲಿ ಜ್ಞಾನೋದಯವಾಗಿ ಮಹರ್ಷಿ ವಾಲ್ಮೀಕಿಯಾಗಿ ಪರಿವರ್ತನೆ ಹೊಂದಿದರು. ಇಂತಹ ಮಹಾನ್ ದಾರ್ಶನಿಕರ ವ್ಯಕ್ತಿತ್ವವನ್ನು ಒಂದೇ ಜಾತಿಗೆ ಸೀಮಿತಗೊಳಿಸುತ್ತಿರುವುದು ನೋವಿನ ಸಂಗತಿ. ನಮ್ಮ ಸಮಾಜದಲ್ಲಿ ಆಗಿಹೋದ ಎಲ್ಲ ಮಹನೀಯರು ಸಮಸ್ತ ಸಮಾಜಕ್ಕೆ ಸಂಬಂಧಿಸಿದವರಾಗಿದ್ದಾರೆ ಎನ್ನುವದನ್ನು ಅರಿತುಕೊಳ್ಳಬೇಕು ಎಂದರು.

ಪ್ರಪಂಚಕ್ಕೆ ರಾಮಾಯಣದಂತಹ ಮೇರು ಕೃತಿ ನೀಡಿದ ಕೀರ್ತಿ ಮಹರ್ಷಿ ವಾಲ್ಮೀಕಿಗೆ ಸಲ್ಲುತ್ತದೆ. 24 ಸಾವಿರಕ್ಕೂ ಹೆಚ್ಚು ಶ್ಲೋಕಗಳನ್ನೊಳಗೊಂಡ ರಾಮಾಯಣವನ್ನು ರತ್ನಾಕರ ಎಂಬ ಮೂಲ ಹೆಸರಿನ ವಾಲ್ಮೀಕಿಯವರು ರಚನೆ ಮಾಡಿರುವುದು ಇತಿಹಾಸ. ಮಹರ್ಷಿ ವಾಲ್ಮೀಕಿ ಅವರ ಆಚಾರ-ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ. ನವೆಂಬರ್ 3ರಂದು ವಾಲ್ಮೀಕಿ ಜಯಂತಿಯನ್ನು ಲಕ್ಷ್ಮೇಶ್ವರ ಪಟ್ಟಣದಲ್ಲಿ ಆಚರಣೆ ಮಾಡಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ತಹಸೀಲ್ದಾರ ಧನಂಜಯ ಎಂ, ಗ್ಯಾರಂಟಿ ಯೋಜನೆ ಅನುಷ್ಠಾನದ ಅಧ್ಯಕ್ಷ ನಾಗರಾಜ ಮಡಿವಾಳರ, ವಾಲ್ಮೀಕಿ ಸಮಾಜದ ತಾಲೂಕಾ ಅಧ್ಯಕ್ಷ ಭೀಮಣ್ಣ ಯಂಗಾಡಿ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಪಿಎಸ್ಐ ನಾಗರಾಜ ಗಡಾದ, ಹಿರಿಯ ಮುಖಂಡರಾದ ನಿಂಗಪ್ಪ ಬನ್ನಿ, ಗಂಗಾಧರ ಮೆಣಸಿನಕಾಯಿ, ಅನಿಲ ಮುಳಗುಂದ, ಥಾವರೆಪ್ಪ ಲಮಾಣಿ, ರಾಜು ಓಲೇಕಾರ, ಹುಣಸಿಮರದ, ಬಿ.ಎಸ್. ಹಡಪದ, ಕೆ.ಪಿ. ಹೂಲಿಕಟ್ಟಿ, ನಾಗರಾಜ ಜಾಲಿಮರದ, ದುಂಡೇಶ ಕೊಟಗಿ, ಸಿ.ಆರ್. ಕೆಂಚಕ್ಕನವರ, ಹನುಮಂತಪ್ಪ ನಂದೆಣ್ಣವರ, ಹೆಸ್ಕಾಂ ಎಇ ಆಂಜನೇಯಪ್ಪ, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಸ್. ಸಂಕನೂರ, ಮಾಂತೇಶ ತಳವಾರ, ಸಚಿನ್ ಮೇಲ್ಮುರಿ, ಬಿ.ಬಿ. ಬಳಿಗಾರ, ಕಲ್ಲಪ್ಪ ಗಂಗಣ್ಣವರ ಮುಂತಾದವರಿದ್ದರು. ಶಿಕ್ಷಕ ಈಶ್ವರ ಮೆಡ್ಲೇರಿ ನಿರೂಪಿಸಿದರು.

## ಗುರು ಕೃಪೆಯಿಂದ ಎಲ್ಲವೂ ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಗುರುಗಳಕೃಪೆಯೊಂದಿದ್ದರೆ, ನಾವುಜೀವನದಲ್ಲಿಏನನ್ನಾದರೂ ಸಾಧಿಸಬಹುದೆಂದು ಸನ್ಮಾರ್ಗ ಪದವಿಪೂರ್ವಮಹಾವಿದ್ಯಾಲಯದ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದಲ್ಲಿಜರುಗಿದ ಮಹರ್ಷಿಶ್ರೀವಾಲ್ಮೀಕಿಜಯಂತಿ ಕಾರ್ಯಕ್ರಮದಲ್ಲಿಮಾತನಾಡಿದ ಅವರು, ಪೂರ್ವಾಶ್ರಮದಲ್ಲಿ ಬೇಡಕುಲದಲ್ಲಿ ಜನಿಸಿದ ಶ್ರೀ ವಾಲ್ಮೀಕಿ ಮಹರ್ಷಿಗಳು ಅಕ್ಷರಸ್ಥರಲ್ಲ. ಪಂಡಿತರೂ ಅಲ್ಲ. ಅಂತಹಸಾಮಾನ್ಯವ್ಯಕ್ತಿಮಹರ್ಷಿ ನಾರದ ಗುರುಗಳ ದರ್ಶನ ಭಾಗ್ಯದಿಂದ,ಗುರುಕೃಪೆಯಿಂದವಿಶ್ವ ಪೂಜ್ಯನೀಯವಾದರಾಮಾಯಣ ಮಹಾಕಾವ್ಯವನ್ನು ಸಂಸ್ಕೃತದಲ್ಲಿ ರಚಿಸಿಸಾಹಿತ್ಯಲೋಕಕ್ಕೆಅನುಪಮ ಕೊಡುಗೆಯನ್ನು ನೀಡಿದರು. ಇದಕ್ಕೆಲ್ಲಾ ಕಾರಣ ಗುರು ಕೃಪೆ. ನಮ್ಮಬಾಳಿಗೆಬೆಳಕುತೋರುವ ಅಂತಹ ಗುರುಗಳನ್ನು ನಿತ್ಯ ನೆನೆಯುವುದು ನಮ್ಮೆಲ್ಲರ ಆದ್ಯ ಕರ್ತವ್ಯವೆಂದು ಹೇಳಿದರು.

ಪ್ರಾಚಾರ್ಯಪ್ರೊ.ಪ್ರೇಮಾನಂದ ರೋಣದ ಮಾತನಾಡಿ, ಗುರು ಕರುಣೆಯಾದಾಗಮಾತ್ರನಾವು ಜೀವನದಲ್ಲಿಗಹನವಾದುದನ್ನು ಸಾಧಿಸಬಹುದು ಎಂಬುದನ್ನು ಮಹರ್ಷಿ ಶ್ರೀ ವಾಲ್ಮೀಕಿಯವರ ಜೀವನದಹಲವಾರುಪ್ರಸಂಗಗಳನ್ನು ಹೇಳಿದರು.

ಮಹಾವಿದ್ಯಾಲಯದಹಿರಿಯ ಉಪನ್ಯಾಸಕಪ್ರೊ.ಮುರಲೀಧರ ಸಂಕನೂರ ಮಾತನಾಡುತ್ತಾ, ವಾಲ್ಮೀಕಿ ಋಷಿಗಳ ಜೀವನ ಚರಿತ್ರೆಯನ್ನು, ವಾಲ್ಮೀಕಿ ಶಬ್ದದ ಅರ್ಥವಿವರಣೆಯನ್ನುತಿಳಿಸಿದರು. ಮಹಾವಿದ್ಯಾಲಯದಆಡಳಿತಾಧಿಕಾರಿ ಎಮ್.ಸಿ.ಹಿರೇಮಠರನೇತೃತ್ವದಲ್ಲಿ ಮಹರ್ಷಿಶ್ರೀವಾಲ್ಮೀಕಿಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ನಿರ್ದೇಶಕರಾದಪ್ರೊ.ರಾಹುಲ ಒಡೆಯರ್, ಪ್ರೊ. ರೋಹಿತ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ, ಕಾಲೇಜಿನ ಸಮಸ್ತಬೋಧಕ,ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವದಲ್ಲಿ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ

# ವಾಲ್ಮೀಕಿ ಸಮುದಾಯದವರು ಧೈರ್ಯಶಾಲಿಗಳು

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವಾಲ್ಮೀಕಿ ಸಮುದಾಯದವರು ಅನಾದಿ ಕಾಲದಿಂದಲೂ ಸ್ವಾಮಿ ನಿಷ್ಠೆಗೆ ಹೆಸರುವಾಸಿಯಾಗಿದ್ದಾರೆ ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ್ ತಿಳಿಸಿದರು.

ಹರಪನಹಳ್ಳಿ ಪಟ್ಟಣದ ನಟರಾಜ ಕಲಾ ಭವನದಲ್ಲಿ ತಾಲೂಕು ಆಡಳಿತ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ತಾಲೂಕು ಪಂಚಾಯಿತಿ ಹಾಗೂ ಪುರಸಭೆಯ ಸಹಯೋಗದಲ್ಲಿ ಮಂಗಳವಾರ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿಯವರು ರಾಮಾಯಣ ಮಹಾಕಾವ್ಯವನ್ನು ಜಗತ್ತಿಗೆ ನೀಡಿ ಮಾನವೀಯ ಮೌಲ್ಯಗಳ ಸಂಬಂಧಗಳು ಮತ್ತು ಕೌಟುಂಬಿಕ ಜೀವನದ ಸಾರವನ್ನು ಜನತೆಗೆ ತಿಳಿಸಿದ್ದಾರೆ. ಈ ಸಮುದಾಯದ ಜನತೆಯು




ಅನಾದಿ ಕಾಲದಿಂದ ಯುದ್ಧ ತರಬೇತಿಯಲ್ಲಿ ನೈಪುಣ್ಯತೆ ಹೊಂದಿದ ಧೈರ್ಯಶಾಲಿಗಳಾಗಿದ್ದಾರೆ ಎಂದರು.

ಎಸಿ ಚಿದಾನಂದ ಗುರುಸ್ವಾಮಿ ಮಾತನಾಡಿ, ಮಹರ್ಷಿ ವಾಲ್ಮೀಕಿಯವರ ರಾಮಾಯಣ ಮಹಾಕಾವ್ಯವನ್ನು ಜಗತ್ತಿನಾದ್ಯಂತ ಸಾಕಷ್ಟು ಕವಿಗಳ ಅವರದೇ ಭಾಷೆಯಲ್ಲಿ ಅನುವಾದ ಮಾಡಿ ಸಾಮಾನ್ಯ ಜನರಿಗೂ ಅರ್ಥವಾಗುವ ಸಂದೇಶ ನೀಡಿದ್ದಾರೆ. ಅದರಲ್ಲಿ ಕುವೆಂಪು ಅವರು ಬರೆದ ರಾಮಾಯಣ ದರ್ಶನಂ ಕೃತಿ ಅತ್ಯುತ್ತಮವಾಗಿದೆ ಎಂದರು.

ವಿಶೇಷ ಉಪನ್ಯಾಸ ನೀಡಿದ ಯುವ ಸಾಹಿತಿ ಪೂಜಾರ್ ಬಸವರಾಜ್, ಭವಿಷ್ಯದ ಪೀಳಿಗೆ ಸಮಾಜದ ಪ್ರತಿಯೊಬ್ಬರ ಮನೆಯಲ್ಲಿ ಮಹರ್ಷಿ ವಾಲ್ಮೀಕಿಯವರ ಭಾವ ಚಿತ್ರಗಳನ್ನು ಇರಿಸಿಕೊಳ್ಳಬೇಕು. ಇಂದಿನ ಆಧುನಿಕ ತಂತ್ರಜ್ಞಾನದಿಂದ ನಮ್ಮ ಇತಿಹಾಸ-ಪರಂಪರೆ ಮರೆಯಾಗುತ್ತಿರುವುದು ಬೇಸರದ ಸಂಗತಿ ಎಂದರು.

ತಾಲೂಕು ವಾಲ್ಮೀಕಿ ಸಮಾಜದ ಮಹಿಳಾ ಅಧ್ಯಕ್ಷೆ ಹೆಚ್.ಟಿ. ವನಜಾಕ್ಷಿ ಶಿವಯೋಗಿ ಮಾತನಾಡಿ, ಹರಪನಹಳ್ಳಿಯನ್ನು ಅನೇಕ ಪಾಳೆಗಾರರು ಸುಭದ್ರ ಆಡಳಿತ ನಡೆಸಿದ ಇತಿಹಾಸವಿದೆ. ಈ ಸಮುದಾಯವು ಪ್ರೀತಿ, ವಿಶ್ವಾಸ, ಹಾಗೂ ಸರ್ವಜನಾಂಗದವರೊಟ್ಟಿಗೆ ಸಹಬಾಳ್ವೆಯಿಂದ ಜೀವನ ಸಾಗಿಸುತ್ತಾ ಬಂದಿದ್ದಾರೆ. ಕುತಂತ್ರಿಗಳ ಹುಟ್ಟಡಗಿಸಲು ಪ್ರತಿಯೊಬ್ಬರೂ ಶಿಕ್ಷಣವಂತರಾಗಿ ಎಂದರು.

ಸಣ್ಣ ಹಾಲಪ್ಪ, ಪುರಸಭೆ ಸದಸ್ಯರಾದ ಎಂ.ವಿ. ಅಂಜಿನಪ್ಪ, ರೆಹಮಾನ್ ಸಾಬ್, ಉದ್ದಾರ ಗಣೇಶ, ಭರತೇಶ, ಗಿರಜ್ಜಿ ನಾಗರಾಜ್, ನಿಚ್ಚವ್ವನಹಳ್ಳಿ ಭೀಮಪ್ಪ, ಲಕ್ಕಳ್ಳಿ ಹನುಮಂತ, ಶಾಸಕರ ಆಪ್ತ ಸಹಾಯಕ ಮತ್ತೂರು ಬಸವರಾಜ್, ನೇತ್ರಾವತಿ, ಲಕ್ಷ್ಮೀ ಚಂದ್ರಶೇಖರ್, ತಹಸೀಲ್ದಾರ್ ಬಿ.ವಿ. ಗಿರೀಶ್ ಬಾಬು, ಇಓ ಚಂದ್ರಶೇಖರ್, ಪುರಸಭೆ ಮುಖ್ಯಾಧಿಕಾರಿ ರೇಣುಕಾ ದೇಸಾಯಿ, ಪರಿಶಿಷ್ಠ ವರ್ಗಗಳ ಕಲ್ಯಾಣಾಧಿಕಾರಿ ಇಬ್ರಾಹಿಂ ಸಾಬ್ ಡಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಭೀಮಪ್ಪ, ಸಮಾಜ ಕಲ್ಯಾಣಾಧಿಕಾರಿ ಎಸ್ ಗಂಗಪ್ಪ, ಸಿಡಿಪಿಓ ಅಶೋಕ್, ಕೃಷಿ ಅಧಿಕಾರಿ ವಿ.ಸಿ. ಉಮೇಶ್, ಸಮಾಜದ ಸ್ಥಾಯಿ ಸಮಿತಿ ಅಧ್ಯಕ್ಷ ಟಿ. ವೆಂಕಟೇಶ್, ಸಮಾಜದ ಮುಖಂಡರಾದ ಎಚ್.ಕೆ. ಹಾಲೇಶ್, ಶಿರಹಟ್ಟಿ ದಂಡೆಪ್ಪ, ಪಟ್ನಾಮದ್ ನಾಗರಾಜ್ ಹಾಗೂ ಇತರರಿದ್ದರು.

## ಟೆಲಿಸ್ಕೋಪ್ ತಯಾರಿಕೆಯ ದಾಖಲೆ



■ವಿಜಯಸಾಕ್ಷಿ ಸುದ್ದಿ, ದೊಡ್ಡಬಳ್ಳಾಪುರ

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಕರ್ನಾಟಕ ಸರ್ಕಾರ, ಆರ್ಯಭಟ ಸಂಚಾರಿ ತಾರಾಲಯ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ದೊಡ್ಡಬಳ್ಳಾಪುರ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ದಾಖಲೆಯ ರಾಜ್ಯಮಟ್ಟದ ಪ್ರಥಮ ಟೆಲಿಸ್ಕೋಪ್ ತರಬೇತಿ ಶಿಬಿರ 'ನಾನೂ ವಿಜ್ಞಾನಿ 2025' ಶೀರ್ಷಿಕೆ ಅಡಿಯಲ್ಲಿ ಅಕ್ಟೋಬರ್ 01ರಿಂದ 09ರವರೆಗೆ 9 ದಿನಗಳ ಕಾಲ ನಡೆದ ತರಬೇತಿ ಶಿಬಿರದಲ್ಲಿ ರಾಜ್ಯದ 168 ವಿದ್ಯಾರ್ಥಿಗಳು ಭಾಗವಹಿಸಿದ್ದಾರೆ.

ಅಕ್ಟೋಬರ್ 8ರ ಸಾಯಂಕಾಲ 4 ಗಂಟೆಗೆ 'ಏಷ್ಯಾ ಬುಕ್ ಆಫ್ ರೆಕಾರ್ಡ್ಸ್', 'ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್' ಸಂಸ್ಥೆಯ ಹಿರಿಯ ವಕೀಲರಾದ ಹರೀಶ್ ಅವರು ತೀರ್ಪುಗಾರರಾಗಿ ಹಾಗೂ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಒಂಬತ್ತು ದಿನಗಳ ಕಾಲ ವಿದ್ಯಾರ್ಥಿಗಳು ತಯಾರಿಸಿದ ಟೆಲಿಸ್ಕೋಪ್‌ಗಳನ್ನು ಪರಿಶೀಲಿಸಲಿದ್ದಾರೆ. ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಡಾ. ಹುಲಿಕಲ್ ನಟರಾಜ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಸಂಚಾಲಕರು ಹಾಗೂ ತರಬೇತುದಾರರಾದ ಬಿ.ಎಸ್. ಸತೀಶ್, ಭಾರತ ಡೋಮ್ ಇನ್ನೋವೇಶನ್ ಪ್ರೈ.ಲಿ ಹಾಗೂ ಆರ್ಯಭಟ ಪ್ಲಾನಿಟೋರಿಯಂನ ಆರ್ ಲಕ್ಷ್ಮೀಪತಿ ಉಪಸ್ಥಿತರಿರುವರು. ಈ ಐತಿಹಾಸಿಕ ಶಿಬಿರದಲ್ಲಿ ರಾಜ್ಯದ ಸುಮಾರು 95 ಶಿಕ್ಷಕರು ಭಾಗವಹಿಸಿದ್ದು, ಪರಿಷತ್ತಿನ ರಾಜ್ಯ ಕಮಿಟಿಯ ಪದಾಧಿಕಾರಿಗಳು ಹಾಗೂ ಜಿಲ್ಲಾಧ್ಯಕ್ಷರುಗಳು ಈ ಸಮಾರಂಭದಲ್ಲಿ ಉಪಸ್ಥಿತರಿರುವರು.

## ಮಾವೋವಾದಿ ಹಿರಿಯ ನಾಯಕ ಮಂದಾ ರೂಬೆನ್ ವಾರಂಗಲ್ ಪೊಲೀಸರಿಗೆ ಶರಣು

■ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ನಿಷೇಧಿತ ಸಿಪಿಐ (ಮಾವೋವಾದಿ) ಪಕ್ಷದ ಹಿರಿಯ ನಾಯಕ ಮಂದಾ ರೂಬೆನ್ ಅಲಿಯಾಸ್ ಕಣ್ಣಣ್ಣ ಮಂಗಳವಾರ ತೆಲಂಗಾಣದ ವಾರಂಗಲ್ ಜಿಲ್ಲೆಯಲ್ಲಿ ಪೊಲೀಸರಿಗೆ ಶರಣಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ದಕ್ಷಿಣ ಬಸ್ತಾರ್ ವಿಭಾಗದ ವಿಭಾಗ ಸಮಿತಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದ, ದಂಡಕಾರಣ್ಯ ವಿಶೇಷ ವಲಯ ಸಮಿತಿಯ ಸದಸ್ಯರಾಗಿದ್ದ ರೂಬೆನ್ (67) ವಾರಂಗಲ್ ಪೊಲೀಸ್ ಆಯುಕ್ತ ಸನ್‌ಪ್ರೀತ್ ಸಿಂಗ್ ಅವರ ಮುಂದೆ ಶರಣಾಗಿದ್ದಾರೆ.

ಹನಮಕೊಂಡ ಜಿಲ್ಲೆಯ ವಂಗಪಾಡು ಗ್ರಾಮದ ಮೂಲದ ರೂಬೆನ್, ತೆಲಂಗಾಣ ಸರ್ಕಾರದ ಪುನರ್ವಸತಿ ಮತ್ತು ಪುನರ್ವಸತಿ ಕಾರ್ಯಕ್ರಮದಡಿಯಲ್ಲಿ ತಮ್ಮ ಕುಟುಂಬದೊಂದಿಗೆ ಶಾಂತಿಯುತ ಜೀವನವನ್ನು ನಡೆಸುವ ಬಯಕೆಯನ್ನು ವ್ಯಕ್ತಪಡಿಸಿದ್ದಾರೆ ಎಂದು ಆಯುಕ್ತರು ತಿಳಿಸಿದ್ದಾರೆ.

1979 ರಲ್ಲಿ ಆರ್‌ಇಸಿ (ಈಗ ಎನ್‌ಐಟಿ ವಾರಂಗಲ್) ಹಾಸ್ಟೆಲ್ ಮೆಸ್‌ನಲ್ಲಿ ಕೆಲಸ ಮಾಡುವಾಗ ರೂಬೆನ್ ಮಾವೋವಾದಿ ಸಿದ್ಧಾಂತದತ್ತ ಆಕರ್ಷಿತರಾದರು. ಆಗಿನ ಸಿಪಿಐ (ಮಾವೋವಾದಿ) ಪ್ರಧಾನ ಕಾರ್ಯದರ್ಶಿ ಮತ್ತು ಮಾಜಿ ಆರ್‌ಇಸಿ ವಿದ್ಯಾರ್ಥಿ ನಂಬಲಾ ಕೇಶವ್ ರಾವ್ ಅವರಿಂದ ಪ್ರಭಾವಿತರಾಗಿ, ನಿಷೇಧಿತ ಸಂಘಟನೆಯನ್ನು ಸೇರಿ ಭೂಗತರಾದರು ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

## ಬೂಟು ಎಸೆದ ಘಟನೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸರ್ವೋಚ್ಚ ನ್ಯಾಯಾಲಯದ ಗೌರವಾನ್ವಿತ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಮೇಲೆ ಬೂಟು ಎಸೆಯಲು ಯತ್ನಿಸಿದ ಸಂವಿಧಾನ ವಿರೋಧಿ ವಕೀಲನ ಕೃತ್ಯ ಖಂಡನೀಯ. ಸಿ.ಜೆ.ಐ ಬಿ.ಆರ್. ಗವಾಯಿಯವರು ದಲಿತ ಸಮುದಾಯಕ್ಕೆ ಸೇರಿದ, ಜೀವಪರವಾಗಿ ಚಿಂತಿಸುವ ಘನವ್ಯಕ್ತಿ. ಅವರು ಬಿಜೆಪಿಯ ಬುಲ್ಡೋಜರ್ ನ್ಯಾಯವನ್ನು ವಿರೋಧಿಸಿ ತೀರ್ಪು ನೀಡಿದವರು ಮತ್ತು ಸಂವಿಧಾನದ ಪ್ರಕಾರ ತೀರ್ಪು ನೀಡುವ ಮೂಲಕ ನ್ಯಾಯದ ಪರ ನಿಂತಿದ್ದರು. ಹಾಗಾಗಿ ರಾಕೇಶ ಕಿಶೋರ ಎಂಬ ಮನುವಾದಿಯೊಬ್ಬ ಅವರ ಮೇಲೆ ಬೂಟು ಎಸೆಯುವ ಪ್ರಯತ್ನ ಮಾಡಿರುವುದು ಖೇದಕರ ಎಂದು ಡಿ.ಎಸ್.ಎಸ್ ಗದಗ ಜಿಲ್ಲಾ ಸಂಘಟನಾ ಸಂಚಾಲಕ ಸತೀಶ ಎಚ್.ಹೂಲಿ ಖಂಡಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಕೇಶ ಕಿಶೋರ ಎಂಬ ಸಂವಿಧಾನ ವಿರೋಧಿ ಈ ವ್ಯಕ್ತಿಯನ್ನು ನಮ್ಮ ದೇಶದಿಂದ ಗಡಿಪಾರು ಮಾಡಲು ಸರ್ಕಾರ ಕ್ರಮ ಕೈಗೊಳ್ಳಬೇಕು. ಈ ದೇಶದ ಸರ್ವೋಚ್ಚ ನ್ಯಾಯಾಧೀಶರಿಗೆ ಈ ರೀತಿ ಆಗುತ್ತದೆ ಎಂದರೆ ಜಾತಿ, ಚತುರ್ವಣ ಪದ್ಧತಿ ಯಾವ ರೀತಿ ಕೆಲಸ ಮಾಡುತ್ತದೆ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕಿದೆ ಎಂದಿದ್ದಾರೆ.

## ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6, 7, 8, 9 ಮತ್ತು 11ನೇ ತರಗತಿಯ ವಿದ್ಯಾರ್ಥಿನಿಯರಿಗೆ ಕರಾಟೆ-ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ನೀಡಲು ಜಿಲ್ಲೆಯಲ್ಲಿರುವ ಸ್ವಯಂ ರಕ್ಷಣಾ ಕೌಶಲ್ಯಗಳ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ಸ್ವಯಂ ರಕ್ಷಣಾ ಕೌಶಲ್ಯ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿಗೆ ದಿನಾಂಕ: 09.10.2025ರ ಒಳಗಾಗಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ ಗದಗ ದೂ.ಸಂ: 08372-297494 ಸಂಪರ್ಕಿಸಲು ಕೋರಲಾಗಿದೆ.

## ಸಂಘಟಿತ ಪ್ರಯತ್ನದಿಂದ ಗದಗ ಮುಂಚೂಣಿಯಲ್ಲಿದೆ

▶▶ಮೊದಲನೇ ಪುಟದಿಂದ

ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಸಿ.ಎನ್. ಕುಂದಗೋಳ ಅವರನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು. ಸಭೆಯಲ್ಲಿ ಸಮೀಕ್ಷೆಯ ಜಿಲ್ಲಾ ನೋಡಲ್ ಅಧಿಕಾರಿ ಸೈದಾ ಬಳ್ಳಾರಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಸಹಾಯಕ ಆಯುಕ್ತ ಗಂಗಪ್ಪ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಬಿಸಿಎಂ ಜಿಲ್ಲಾ ಅಧಿಕಾರಿ ಎಂ.ಎಂ. ತುಂಬರಮಟ್ಟಿ ಸೇರಿದಂತೆ ಆರ್.ಎಸ್. ಬುರಡಿ, ಅಮಿತ್ ಬಿದರಿ, ಶ್ರೀಶೈಲ್ ಸೋಮನಕಟ್ಟಿ, ಕೆ. ಮಲ್ಲಯ್ಯ, ಡಾ. ನಂದಾ ಹಣಬರಟ್ಟಿ, ಡಾ. ಬಸವರಾಜ ಬಳ್ಳಾರಿ, ರಾಜಾರಾಮ ಪವಾರ್, ವಸಂತ ಮಡ್ಲೂರ, ತಹಸೀಲ್ದಾರರು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಬಿಇಓಗಳು ಉಪಸ್ಥಿತರಿದ್ದರು

## ಜನಸಾಮಾನ್ಯರ ವೇದಿಕೆಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ ಜ್ವಲಂತ ಸಮಸ್ಯೆಗಳು ಹಾಗೂ ಜನಪ್ರತಿನಿಧಿಗಳ ನಿರ್ಲಕ್ಷ್ಯವನ್ನು ಸರಕಾರದ ಗಮನಕ್ಕೆ ತರಲು ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಜಾಥಾ ಹಮ್ಮಿಕೊಂಡಿದ್ದು, ನಮ್ಮ ಬೇಡಿಕೆಗಳನ್ನು ಈಡೇರಿಸಬೇಕೆಂದು ಜನಸಾಮಾನ್ಯರ ವೇದಿಕೆ ವತಿಯಿಂದ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಜನಸಾಮಾನ್ಯರ ವೇದಿಕೆಯ ರಾಜ್ಯ ಸಂಚಾಲಕ ಯಲ್ಲಪ್ಪ ಹಗಡೆ ಮಾತನಾಡಿ, ಬೀದರಿನಿಂದ ಬೆಂಗಳೂರಿನವರೆಗೆ ಯುವ ಪರಿವರ್ತನೆ ಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ. ನಮ್ಮ ಪ್ರಮುಖ ಬೇಡಿಕೆಗಳಾದ ರಾಜ್ಯದ ಪ್ರತಿಯೊಂದು ಸರಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವುದು, ಪೂರ್ಣ ಪ್ರಮಾಣದ ವಿಷಯವಾರು ಶಿಕ್ಷಕರನ್ನು ನೇಮಕ ಮಾಡುವುದು, ಡಿಜಿಟಲ್ ಪಾರದರ್ಶಕತೆ ಅಳವಡಿಸಿಕೊಂಡು ಭ್ರಷ್ಟಾಚಾರ ಮುಕ್ತ ನೇಮಕಾತಿ ಕೈಗೊಳ್ಳುವುದು, ಖಾಸಗಿ ಕೈಗಾರಿಕೆಗಳಲ್ಲಿ ಉದ್ಯೋಗ ಮೀಸಲಾತಿ ಮತ್ತು ಎಲ್ಲಾ ಹುದ್ದೆಗಳಲ್ಲಿ ಸ್ಥಳೀಯರಿಗೆ ಪ್ರಾಮುಖ್ಯತೆ ಕಲ್ಪಿಸುವುದು ಇತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಈಗಾಗಲೇ ಮೀಸಲಾತಿ ಸರ್ಕಾರಿ ಗುತ್ತಿಗೆ ಕಾಮಗಾರಿಯಲ್ಲಿ ಎಸ್.ಸಿ/ಎಸ್.ಟಿ ಮತ್ತು 2ಎ ವರ್ಗಕ್ಕೆ ನೀಡಲಾಗಿದೆ. ಸಮಗ್ರ ಅನುಷ್ಠಾನಕ್ಕೆ ಕಾಮಗಾರಿಯಲ್ಲಿ ಕೆಲಸಗಳ ಮತ್ತು ಸೇವಾ ಕಾರ್ಯಗಳನ್ನು ವಿಲೀನಗೊಳಿಸಿ ಮೀಸಲಾತಿ ತಪ್ಪಿಸುವ ಕೆಲಸ ನಡೆದಿದ್ದು, ಎಲ್ಲ ಇಲಾಖೆಗಳಲ್ಲಿ ನಿಯಮ ಉಲ್ಲಂಘನೆ ಮತ್ತು ಮೀಸಲಾತಿ ವರ್ಗಕ್ಕೆ ಅನ್ಯಾಯವಾಗದಂತೆ ಸರಿಪಡಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಮುಂತಾದವರು ಉಪಸ್ಥಿತರಿದ್ದರು.

## ನಿಧನ

### ಶಿವಪ್ಪ ವೀರಪ್ಪ ಧರ್ಮಾಯತ



**ನರೇಗಲ್ಲ:** ಇಲ್ಲಿಯ ಗುಡಿ ಓಣಿಯ ನಿವಾಸಿ, ನಿವೃತ್ತ ಶಿಕ್ಷಕ ಶಿವಪ್ಪ ವೀರಪ್ಪ ಧರ್ಮಾಯತ (ಬಂಕದ) (87) ಮಂಗಳವಾರ ನಿಧನ ಹೊಂದಿದರು. ಅವರಿಗೆ ಪತ್ನಿ, ಮೂವರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

## ನಿಧನ

### ಸುರೇಶ ಶಿದ್ಲಿಂಗ



**ಮುಳಗುಂದ:** ಪಟ್ಟಣದ ಸುರೇಶ ಶಿದ್ಲಿಂಗ (36) ಮಂಗಳವಾರ ಅಕಾಲ ನಿಧನ ಹೊಂದಿದರು.

ಮೃತರು ತಾಯಿ, ಪತ್ನಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

## ರಾಜ್ಯ ಸಮಿತಿಯ ಸದಸ್ಯರಾಗಿ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿನೌಕರರಸಂಘದಿಂದ ಬೆಂಗಳೂರಿನಲ್ಲಿ ಜರುಗಿದ ಸಮಿತಿಯ ಸಭೆಯಲ್ಲಿ ಗದಗ ಜಿಲ್ಲಾಸದಸ್ಯರನ್ನಾಗಿಮುಂಡರಗಿ ತಾಲೂಕಿನ ಗ್ರಾ.ಪಂ ನೌಕರರ ಸಂಘದಅಧ್ಯಕ್ಷರಾದಬಸವರಾಜ ವಿರೂಪಾಕ್ಷಪ್ಪಮೇವುಂಡಿಅವರನ್ನು ಆಯ್ಕೆ ಮಾಡಿ ರಾಜ್ಯಾಧ್ಯಕ್ಷ ಎಂ.ಬಿ. ನಾಡಗೌಡರ, ಪ್ರಧಾನ ಕಾರ್ಯದರ್ಶಿಜೆ.ಎಂ.ಜೈನೆಖಾನ ಆದೇಶ ಹೊರಡಿಸಿದ್ದಾರೆ.

ಬಸವರಾಜ ಮೇವುಂಡಿ ಅವರಿಗೆ ಹಿರಿಯ ಅಧಿಕಾರಿಗಳು, ಮುಂಡರಗಿ ತಾಲೂಕಾ ಗ್ರಾ.ಪಂ ನೌಕರರು, ಗದಗ ಜಿಲ್ಲಾ ಸಮಿತಿ, ಮುಂಡರಗಿತಾಲೂಕುಸಮಿತಿಯ ಸದಸ್ಯರು,ಜಂತ್ಲಿಶಿರೂರಿನಗ್ರಾ.ಪಂ ಅಧ್ಯಕ್ಷ, ಉಪಾಧ್ಯಕ್ಷರು, ಸದಸ್ಯರು ಹಾಗೂಗ್ರಾಮಸ್ಥರುಅಭಿನಂದನೆ ಸಲ್ಲಿಸಿದ್ದಾರೆ.

## ಇಂದು ಪ್ರಗತಿ ಪರಿಶೀಲನಾ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 8 ರಂದು ಬೆಳಗ್ಗೆ 10ಗಂಟೆಗೆ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗದಲ್ಲಿ ಬೆಳಗಾವಿ ವಿಭಾಗದ ಕಿತ್ತೂರು ಕರ್ನಾಟಕದ ಅಡಿಯಲ್ಲಿ ಬರುವ 07ಜಿಲ್ಲೆಗಳು 2026/27ನೇ ಸಾಲಿನ ವಾರ್ಷಿಕ ಜಿಲ್ಲಾ ಕರುಡು ಯೋಜನೆ, ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2025 ಹಾಗೂ ಜಿಲ್ಲಾ ಮಾನವ ಅಭಿವೃದ್ಧಿ ಯೋಜನೆ–2025 ವರದಿಗಳ ತಯಾರಿಕೆ ಕುರಿತು ಪ್ರಗತಿ ಪರಿಶೀನಾ ಸಭೆ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

### ರೋಣ ತಾಲೂಕಿನ 22 ಗ್ರಾಮಸ್ಥರು ಇ–ಕೆವೈಸಿ ಮಾಡಿಕೊಳ್ಳಲು ತಾ.ಪಂ ಕರೆ

# ನರೇಗಾ ಜಾಬ್ ಕಾರ್ಡ್‌ಗೆ ಇ–ಕೆವೈಸಿ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ರೋಣ



ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಅಡಿಯಲ್ಲಿ ಕೆಲಸ ಮಾಡುತ್ತಿರುವ ರೋಣ ತಾಲೂಕಿನ ಕೂಲಿಕಾರರಿಗೆ ಇ–ಕೆವೈಸಿ (ಜಿಐಜಿಎ) ಪ್ರಕ್ರಿಯೆ ಕಡ್ಡಾಯಗೊಳಿಸಲಾಗಿದೆ. ತಾಲೂಕಿನ ಎಲ್ಲಾ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಜಾಬ್ ಕಾರ್ಡ್ ಹೊಂದಿರುವ ಕೂಲಿಕಾರರು ತಮ್ಮ ಇ–ಕೆವೈಸಿ ಪ್ರಕ್ರಿಯೆಯನ್ನು ತಕ್ಷಣ ಪೂರ್ಣಗೊಳಿಸಬೇಕೆಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಕರೆ ನೀಡಿದ್ದಾರೆ.

ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಬಂದ ಸೂಚನೆಯಂತೆ, 2025ರ ಸೆಪ್ಟೆಂಬರ್ 30ರೊಳಗೆ ಎನ್‌ಎಂಎಂಎಸ್ (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ಇ–ಕೆವೈಸಿ ಪ್ರಕ್ರಿಯೆ ಕಡ್ಡಾಯವಾಗಿದೆ. ಆದರೆ, ರೋಣ ತಾಲೂಕಿನಲ್ಲಿ ಇನ್ನೂ ಹೆಚ್ಚಿನ ಕೂಲಿಕಾರರು ಈ ಪ್ರಕ್ರಿಯೆ ಪೂರ್ಣಗೊಳಿ ಸದಿರುವುದರಿಂದ, ತಾಲೂಕು ಪಂಚಾಯಿತಿಯ ಐಇಸಿ ಚಟುವಟಿಕೆಗಳ ಮೂಲಕ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಲಾಗಿದೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಐಇಸಿ ಚಟುವಟಿಕೆಗಳ ಮೂಲಕ ಗ್ರಾಮಸ್ಥರಿಗೆ ಇ–ಕೆವೈಸಿಯ ಮಹತ್ವ ತಿಳಿಸಲಾಗುತ್ತಿದೆ. ಕಾರ್ಮಿಕರು ತಮ್ಮ ಜಾಬ್ ಕಾರ್ಡ್ ಮತ್ತು ಆಧಾರ್ ಕಾರ್ಡ್ ಸಹಿತವಾಗಿ ಗ್ರಾಮ ಪಂಚಾಯಿತಿ ಕಚೇರಿಗೆ ಅಥವಾ ಆಧಾರ್ ಕೇಂದ್ರಗಳಿಗೆ ಭೇಟಿ ನೀಡಿ ಇ–ಕೆವೈಸಿ ಪ್ರಕ್ರಿಯೆ ಪೂರ್ಣ ಗೊಳಿಸಬೇಕಾಗಿದೆ ಎಂದು ತಿಳಿಸಿದ್ದಾರೆ.



ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಿದರೆ ಕೂಲಿ ಪಾವತಿಯಲ್ಲಿ ವೇಗ ಮತ್ತು ಪಾರದರ್ಶಕತೆ ಹೆಚ್ಚುತ್ತದೆ. ಜೊತೆಗೆ, ಕಾರ್ಮಿಕರ ಹಾಜರಾತಿಯನ್ನು ಮುಖ ಆಧಾರಿತ (Face Authentication) ತಂತ್ರದ ಮೂಲಕ ಎನ್‌ಎಂಎಂಎಸ್ ಅಪ್ಲಿಕೇಶನ್‌ನಲ್ಲಿ ನಿಖರವಾಗಿ ದಾಖಲಿಸಬಹುದು. ಇದು ನರೇಗಾ ಯೋಜನೆಯ ವಿಶ್ವಾಸಾರ್ಹತೆ ಮತ್ತು ಪರಿಣಾಮಕಾರಿತೆಯನ್ನು ಹೆಚ್ಚಿಸುತ್ತದೆ.

ಸದ್ಯದಲ್ಲೇ ಎನ್‌ಎಂಎಂಎಸ್ ಅಪ್ಲಿಕೇಶನ್‌ನಲ್ಲಿ ಕಾರ್ಮಿಕರ ಫೋಟೋ ಸೆರೆಹಿಡಿದು, ಆಧಾರ್ ಸಂಖ್ಯೆಯೊಂದಿಗೆ ಮುಖ ಹೊಂದಾಣಿಕೆ ಮೂಲಕ ಹಾಜರಾತಿ ದೃಢಪಡಿಸಲಾಗುತ್ತಿದೆ. ಇ–ಕೆವೈಸಿ ಪೂರ್ಣಗೊಳಿಸದ ಕಾರ್ಮಿಕರ ಹಾಜರಾತಿಯನ್ನು ಮುಂದಿನ ದಿನಗಳಲ್ಲಿ ಪರಿಗಣಿಸಲಾಗುವುದಿಲ್ಲ ಎಂದು ಕಾರ್ಯ ನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

> ರೋಣ ತಾಲೂಕಿನ ಒಟ್ಟು 22 ಗ್ರಾಮ ಪಂಚಾಯಿತಿಗಳಲ್ಲಿ 30054 ಕುಟುಂಬಗಳಿದ್ದು, 73585 ನೋಂದಣಿ ಆದ ಕೂಲಿಕಾರರು ಇದ್ದಾರೆ. ಅದರಲ್ಲಿ 50113 ಸಕ್ರಿಯ ಕೂಲಿಕಾರರು ಇರುತ್ತಾರೆ. ಇವರೆಲ್ಲರೂ ಇ–ಕೆವೈಸಿ ಮಾಡಿಕೊಳ್ಳಲು ತಿಳಿಸಲಾಗಿದೆ. ತಾಲೂಕಿನಲ್ಲಿ ಸಾಮೂಹಿಕ ಹಾಗೂ ವೈಯಕ್ತಿಕ ಕಾಮಗಾರಿಗಳ ಮೂಲಕ ಕೂಲಿಕಾರರಿಗೆ 100 ದಿನಗಳ ಕನಿಷ್ಠ ಉದ್ಯೋಗ ಒದಗಿಸಲಾಗುತ್ತಿದ್ದು, ಸರ್ಕಾರದ ಈ ಮಹತ್ವಾಕಾಂಕ್ಷಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಎಲ್ಲ ಕಾರ್ಮಿಕರು ತಕ್ಷಣ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕೆಂದು ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿಗಳು ಮನವಿ ಮಾಡಿದ್ದಾರೆ.

## ಗ್ರಾಮೀಣ ಪ್ರತಿಭೆಗೆ ಸಹಾಯ ಹಸ್ತ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕದಾದ್ಯಂತ ಜೂನಿಯರ್ ರಾಜಕುಮಾರ್ ಪಾತ್ರದಲ್ಲಿ ಅಭಿನಯಿಸಿ ಡಾ. ರಾಜಕುಮಾರ ಅವರನ್ನು ನೆನಪಿಸುತ್ತಿದ್ದ ಗದಗ ತಾಲೂಕಿನ ಅಶೋಕ ಕಿರಟಗೇರಿ ಇಂದು ಅನಾರೋಗ್ಯದಿಂದ ಬಳಲುತ್ತಿದ್ದು, ಇದನ್ನು ಮನಗಂಡ ಶ್ರೀ ಸಿದ್ಧಲಿಂಗೇಶ್ವರ ನಾಟ್ಯ ಸಂಘದ ಕಲಾವಿದರು ಹಾಗೂ ಶ್ರೀ ಗುರು ಪುಟ್ಟರಾಜ ಕಲಾಪೋಷಕ ಸಂಘದ ವತಿಯಿಂದ ಸಹಾಯ ಹಸ್ತವನ್ನು ನೀಡಿ ಗೌರವಿಸಿದರು.

ವರನಟ ಡಾ. ರಾಜ್‌ಕುಮಾರರ ಅಭಿನಯವನ್ನು ಚಾಚು ತಪ್ಪದೇ ಪಾಲಿಸುತ್ತಿದ್ದ ಅಶೋಕ ಕಿರಟಗೇರಿ ಅವರು ಇತ್ತೀಚೆಗೆ ಪಾರ್ಶ್ವವಾಯುವಿನಿಂದ ಬಳಲುತ್ತಿದ್ದಾರೆ. ಇದನ್ನು ಅರಿತ ಕಲಾವಿದರು ಮತ್ತೊಬ್ಬ ಕಲಾವಿದನಿಗೆ ಸಹಾಯ ಮಾಡಲು ಮುಂದಾಗಿದ್ದಾರೆ. ಕುಮಾರ ಮಂಡಲಗಿರಿ ನೇತೃತ್ವದ ಶ್ರೀ ಸಿದ್ದಲಿಂಗೇಶ್ವರ ನಾಟ್ಯ ಸಂಘದ ಕಲಾವಿದರು ಅಶೋಕ ಕಿರಟಗೇರಿ ಅವರಿಗೆ ಆರ್ಥಿಕ ಸಹಾಯ ಮಾಡಿ ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಶ್ರೀ ಗುರು ಪುಟ್ಟರಾಜ ಕಲಾ ಪೋಷಕ ಸಂಘದ ಉಪಾಧ್ಯಕ್ಷ ನಜೀರ್ ಸಾಬ್ ಮಜ್ಜಗಿ ಮಾತನಾಡಿ, ಅಶೋಕ ಕಿರಟಗೇರಿ ಅವರು ಅದ್ಭುತ ಕಲಾಪ್ರತಿಭೆ. ಅವರು ಅನಾರೋಗ್ಯದಿಂದ ಬಳಲುತ್ತಿರುವುದು ಅತ್ಯಂತ ನೋವಿನ ಸಂಗತಿ. ಒಬ್ಬ ಕಲಾವಿದ ತೊಂದರೆಯಲ್ಲಿದ್ದಾಗ ಅವನಿಗೆ ಸಹಾಯ ಹಸ್ತ ಚಾಚುವುದು ಕಲಾಭಿಮಾನಿಗಳ ಗುಣ. ಶ್ರೀ ಸಿದ್ಧಲಿಂಗೇಶ್ವರ ನಾಟ್ಯ ಸಂಘದ ಪ್ರತಿಯೊಬ್ಬರೂ ಬಡ ಕಲಾವಿದರು. ತಮ್ಮ ಬಡತನದಲ್ಲಿಯೂ ಮತ್ತೊಬ್ಬ ಕಲಾವಿದನ ಕಷ್ಟಕ್ಕೆ ಸ್ಪಂದಿಸಿ ಆರ್ಥಿಕ ಸಹಾಯ ಮಾಡುವ ಮೂಲಕ ಮಾನವೀಯತೆ ತೋರ್ಪಡಿಸಿದ್ದು ಸಂತೋಷದ ವಿಷಯ ಎಂದರು.

## ಶ್ರೀ ಮಹರ್ಷಿ ವಾಲ್ಮೀಕಿ ಜಗತ್ತಿಗೇ ಮಾದರಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡ್ರ ಮಾತನಾಡಿ, ಶ್ರೀ ಮಹರ್ಷಿ ವಾಲ್ಮೀಕಿಯವರು ರಾಮಾಯಣವನ್ನು ಬರೆದು ಜಗತ್ತಿಗೆ ಮಾದರಿಯಾದರು. ಇಂತಹ ಮಹಾನ್ ವ್ಯಕ್ತಿಯ ಜಯಂತ್ಯುತ್ಸವವನ್ನು ಸರ್ವರೂ ಅತ್ಯಂತ ಹೆಮ್ಮೆಯಿಂದ ಆಚರಿಸುವಂತಾಗಲಿ ಎಂದುರು.

ಬಿಜೆಪಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ಮಹರ್ಷಿಗಳ ಜಯಂತಿಯನ್ನು ಜ್ಯಾತ್ಯಾತೀವಾಗಿ ನೆರವೇರಿಸಬೇಕು ಎಂದರು. ಪ್ರಮುಖರಾದ ರವಿ ದಂಡಿನ, ಈಶಪ್ಪ ನಾಯ್ಕರ, ಎಂ.ಎಂ. ಹಿರೇಮಠ, ಬಿಜೆಪಿ ಎಸ್.ಟಿ. ಮೋರ್ಚಾ ಜಿಲ್ಲಾಧ್ಯಕ್ಷ ಈಶ್ವರಪ್ಪ ರಂಗಪ್ಪನವರ ಸಂದರ್ಭೋಚಿತವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಪ್ರಶಾಂತ ನಾಯ್ಕರ, ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಅಶೋಕ ಕರೂರ, ರಾಘವೇಂದ್ರ ಯಳವತ್ತಿ, ಶಶಿಧರ ದಿಂಡೂರ, ಅನಿಲ ಅಬ್ಬಿಗೇರಿ, ರಮೇಶ ಸಜ್ಜಗಾರ, ನಾಗರಾಜ ತಳವಾರ, ಶಂಕರ ಕಾಕಿ, ಅಶೋಕ ಕುಡತಿನಿ, ವಿಜಯಲಕ್ಷ್ಮೀ ಮಾನ್ವಿ, ಪದ್ಮಿನಿ ಮುತ್ತಲದಿನ್ನಿ, ಡಿ.ಬಿ. ಕರೀಗೌಡ್ರ, ಮಂಜುನಾಥ ಶಾಂತಗೇರಿ, ಕೆ.ಪಿ. ಕೋಟಿಗೌಡ್ರ, ಎಂ.ಎ. ಸಂಗನಾಳ ವಕೀಲರು, ಮಾಂತೇಶ ಬಾತಾಖಾನಿ, ಮಂಜುನಾಥ ಎಲಿಸುರ, ಜಗದೀಶ ತಳವಾರ, ಅಪ್ಪಣ್ಣ ಟೆಂಗಿನಕಾಯಿ, ಶರಣಪ್ಪ ತಳಕಲ, ರಾಮಣ್ಣ ರಣತೂರ, ಪಕ್ಕೀರಪ್ಪ ಮಾದಣ್ಣವರ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಎಸ್.ಟಿ. ಮೋರ್ಚಾ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಾಯ್.ಪಿ. ಅಡ್ನೂರ ನಿರೂಪಿಸಿದರು. ಯಲ್ಲಪ್ಪ ಶಿರಿ ವಂದಿಸಿದರು.

## ಚರಗ ಚೆಲ್ಲಿ ಸಂಭ್ರಮಿಸಿದ ರೈತರು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರ ಬದುಕಿಗೆ ಆಸರೆಯಾದ ಭೂಮಿತಾಯಿಗೆ ಉಡಿ ತುಂಬುವ ಸಾಂಪ್ರದಾಯಿಕ ಸೀಗಿ ಹುಣ್ಣಿಮೆ ಹಬ್ಬವನ್ನು ರೈತರು ಮಂಗಳವಾರ ಶ್ರದ್ಧಾ- ಭಕ್ತಿಯಿಂದ ಆಚರಿಸಿದರು.

ಮುಂಗಾರಿನ ಬೆಳೆಗಳ ಫಸಲು ಪಡೆದು ಹಿಂಗಾರಿನಲ್ಲಿ ಬಿತ್ತನೆ ಸಂದರ್ಭದಲ್ಲಿ ಉತ್ತಮ ಬೆಳೆ ಬರಲೆಂದು ಭೂತಾಯಿಗೆ ಉಡಿ ತುಂಬಿ ಚರಗ ಚೆಲ್ಲಿ ಬೀಗರು, ಆತ್ಮೀಯರೊಡಗೂಡಿ ಸಹಪಂಕ್ತಿ ಭೋಜನದೊಂದಿಗೆ ಸೀಗಿ ಹುಣ್ಣಿಮೆ ಹಬ್ಬ ಆಚರಿಸುವುದು ಸಂಪ್ರದಾಯ. ಹಬ್ಬದ ದಿನ ಸಿಂಗರಿಸಿದ ಎತ್ತಿನ ಚಕ್ಕಡಿ, ಟ್ರ್ಯಾಕ್ಟರ್ ಇತ್ಯಾದಿ ವಾಹನಗಳ ಮೂಲಕ ಹೊಲಕ್ಕೆ ತೆರಳಿ ಬನ್ನಿಗಿಡದ ಕೆಳಗಿರುವ ಪಾಂಡವರ ಕಲ್ಲುಗಳನ್ನು ಪೂಜಿಸುತ್ತಾರೆ. ನಂತರ ಭೂಮಿ ತಾಯಿಗೆ ಉಡಿ ತುಂಬಿ ತಯಾರಿಸಿದ ಪುಂಡಿಪಲ್ಲೆ, ಉಂಡಗಡುಬು ಇತರೇ ಸಾಂಪ್ರದಾಯಿಕ ಪದಾರ್ಥಗಳ ಪ್ರಸಾದ ಚರಗ ಚೆಲ್ಲುವ ಸಂಪ್ರದಾಯವೇ ಸೀಗಿ ಹುಣ್ಣಿಮೆ.

ಈ ವರ್ಷ ಅತಿವೃಷ್ಟಿ ಮತ್ತೆ ರೈತರನ್ನು ಸಂಕಷ್ಟಕ್ಕೆ ದೂಡಿದೆ. ಆದರೆ, ಸಂಪ್ರದಾಯವನ್ನು ಬಿಡದೆ ಆಚರಣೆ ಮಾಡಬೇಕಾದ ಹಿನ್ನೆಲೆಯಲ್ಲಿ ಸೀಗಿ ಹುಣ್ಣಿಮೆಯನ್ನು ಆಚರಿಸುತ್ತಿದ್ದೇವೆ. ಮುಂಗಾರು ಬೆಳೆ ರೈತರನ್ನು ನಿರಾಸೆಗೊಳಿಸಿದ್ದು, ಹಿಂಗಾರು ಮಳೆ–ಬೆಳೆ ಉತ್ತಮವಾಗಿ ಆಗಬಹುದು ಎನ್ನುವ ಆಸೆಯನ್ನು ರೈತ ಸಮುದಾಯ ಹೊಂದಿದೆ ಎನ್ನುತ್ತಾರೆ ರೈತರಾದ ಬಸವರಾಜ ಮೆಣಸಿನಕಾಯಿ, ನಾಗರಾಜ ಪೂಜಾರ (ಸೂರಣಗಿ), ಅಶೋಕಪ್ಪ ಸೊರಟೂರ (ಗೊಜನೂರು).


## ಶೂ ಎಸೆದ ವಕೀಲರನ್ನು ಗಡಿಪಾರು ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸುಪ್ರೀಂ ಕೋರ್ಟಿನ ಮುಖ್ಯ ನ್ಯಾಯಮೂರ್ತಿಗಳಾದ ಸಿಜೆಐ ಬಿ.ಆರ್. ಗವಾಯಿ ಅವರ ಮೇಲೆ ಶೂ ಎಸೆಯಲು ಯತ್ನಿಸಿರುವ ಘಟನೆ ಖಂಡನೀಯ. ಇವರ ಮೇಲೆ ದೇಶದ್ರೋಹದ ಪ್ರಕರಣ ದಾಖಲಿಸಿ ದೇಶದಿಂದ ಗಡಿಪಾರು ಮಾಡಬೇಕೆಂದು ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳ ಮುಖಾಂತರ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ದಲಿತ ಸಮುದಾಯದಕ್ಕೆ ಸೇರಿರುವ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ಸಾಮಾಜಿಕ ಪ್ರತಿರೋಧಗಳನ್ನು ಎದುರಿಸಿ ಅರ್ಹತೆ ಮತ್ತು ಸಾಧನೆಯ ಮೂಲಕ ಉನ್ನತ ಸ್ಥಾನಕ್ಕೇರಿದ್ದಾರೆ. ಆದರೆ ಜಾತಿ ಮೂಲದ ಅಸಮಾನತೆ ಮತ್ತು ಅಸಹನೆ ಸಂವಿಧಾನ ಜಾರಿಗೆ ಬಂದು 75 ವರ್ಷಗಳ ನಂತರವೂ ಭದ್ರವಾಗಿ ಉಳಿದುಕೊಂಡಿದೆ ಎನ್ನುವುದಕ್ಕೆ ಈ ಘಟನೆ ಸಾಕ್ಷಿಯಾಗಿದೆ. ಈ ಘಟನೆ ನಡೆಯಲು ಪ್ರೇರೇಪಿಸಿದವರನ್ನು ಹಾಗೂ ಇವನ ಹಿಂದಿರುವವರನ್ನು ತನಿಖೆಗೆ ಒಳಪಡಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಅಧ್ಯಕ್ಷ ಶಿವಾನಂದ ಶೇಖಪ್ಪ ತಮ್ಮಣ್ಣವರ, ಪ್ರಧಾನ ಕಾರ್ಯದರ್ಶಿ ನಿತೀಶ ಗಟ್ಟೆಣ್ಣವರ, ಯುವ ಮುಖಂಡ ರಾಮಪ್ಪ ಚಲವಾದಿ ಮುಂತಾದವರು ಉಪಸ್ಥಿತರಿದ್ದರು.



## ಮಹರ್ಷಿ ವಾಲ್ಮೀಕಿ ಕೊಡುಗೆ ಅಪಾರ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಿಂದೂ ಪಂಚಾಂಗದ ಪ್ರಕಾರ ಮಹರ್ಷಿ ವಾಲ್ಮೀಕಿ ಜಯಂತಿಯು ಪ್ರತಿ ವರ್ಷ ಆಶ್ವಿನ ಮಾಸದ ಪೂರ್ಣಿಮಾ ದಿನದಂದು ಬರುತ್ತದೆ. ಗೌರವಾನ್ವಿತ ಋಷಿ ಮತ್ತು ಕವಿ ಮಹರ್ಷಿ ವಾಲ್ಮೀಕಿ, ವಿಶೇಷವಾಗಿ ಅವರ ಮಹಾಕಾವ್ಯವಾದ ರಾಮಾಯಣದ ಮೂಲಕ ಹಿಂದೂ ಧರ್ಮಕ್ಕೆ ನೀಡಿದ ಅಪ್ರತಿಮ ಕೊಡುಗೆಗಾಗಿ ಇವರನ್ನು ಪೂಜಿಸಲಾಗುತ್ತದೆ ಎಂದು ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ಹೇಳಿದರು.

ಪಟ್ಟಣ ಪಂಚಾಯಿತಿ ಸಭಾ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವಾಲ್ಮೀಕಿ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ರತ್ನಾಕರನಾಗಿ ಜನಿಸಿದ ಋಷಿ ವಾಲ್ಮೀಕಿಯ ಜೀವನವು ನಾರದ ಋಷಿಯನ್ನು ಭೇಟಿಯಾದ ನಂತರ ತಿರುವು ಪಡೆದು, ಅವರನ್ನು ತಪಸ್ಸಿಗೆ ಕರೆದೊಯ್ದು ಅಂತಿಮವಾಗಿ ಮಹಾನ್ ಕವಿಯಾಗಿಸಿತು. ಅವರನ್ನು ಸಂಸ್ಕೃತ ಸಾಹಿತ್ಯದ ಮೊದಲ ಕವಿಯಾಗಿ ಆದಿ ಕವಿ ಎಂದು ಪೂಜಿಸಲಾಗುತ್ತದೆ. ವಾಲ್ಮೀಕಿಯ ಬೋಧನೆಗಳು ರಾಮನ ಮೌಲ್ಯಗಳನ್ನು ಉತ್ತೇಜಿಸುತ್ತವೆ. ಸತ್ಯ, ಕರ್ತವ್ಯ ಮತ್ತು ಕರುಣೆಯನ್ನು ಒತ್ತಿಹೇಳುತ್ತವೆ. ಮುಖ್ಯವಾಗಿ ಗುಜರಾತ್, ಪಂಜಾಬ್ ಮತ್ತು ರಾಜಸ್ಥಾನದಲ್ಲಿ ಕಂಡುಬರುವ ವಾಲ್ಮೀಕಿ ಸಮುದಾಯವು ಅವರನ್ನು ತಮ್ಮ ಪೂರ್ವಜ ಮತ್ತು ದೇವರೆಂದು ಪೂಜಿಸುತ್ತಾರೆ ಎಂದರು.

ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಕಮಿಟಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ, ಶ್ರೀಶೈಲಪ್ಪ ಬಂಡಿಹಾಳ, ದಾವುದಲಿ ಕುದರಿ, ಈರಪ್ಪ ಜೋಗಿ, ಫಕೀರಪ್ಪ ಬಂಬ್ಲಾಪೂರ, ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಎಚ್.ಎಂ. ಸಿತೀಮನಿ, ರಮೇಶ ಹಲಗಿಯವರ, ಎನ್.ಬಿ. ಬೇಲೇರಿ, ಜಮೀಲಾಬೇಗಂ ಬಂಕಾಪೂರ, ಅಶೋಕ ಹುಲಕೋಟಿ, ಬಸವರಾಜ ಅಬ್ಬಿಗೇರಿ, ಶೇಖಪ್ಪ ಜುಟ್ಲ, ಸತೀಶ ಕುರಕುಂದಿ, ಯಲ್ಲಪ್ಪ ಮಣ್ಣೊಡ್ಡರ, ಅಲ್ಲಾಭಕ್ಷಿ ನದಾಫ್ ಮುಂತಾದವರು ಉಪಸ್ಥಿತರಿದ್ದರು.

## ಸಾಲ ಮರುಪಾವತಿಗೆ ಒತ್ತಾಯಿಸದಂತೆ ಸೂಚಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಅತಿವೃಷ್ಟಿಯಿಂದ ರೈತರು ಮುಂಗಾರು ಹಂಗಾಮಿನ ಹೆಸರು, ಈರುಳ್ಳಿ, ಶೇಂಗಾ ಬೆಳೆ ಕಳೆದುಕೊಂಡು ಕಂಗಾಲಾಗಿರುವ ವೇಳೆ ಬ್ಯಾಂಕ್ ಅಧಿಕಾರಿಗಳು ಸಾಲ ಮರುಪಾವತಿ ಮಾಡುವಂತೆ ರೈತರಿಗೆ ನೋಟೀಸ್ ನೀಡುವುದು ಖಂಡನೀಯ. ಜಿಲ್ಲಾಧಿಕಾರಿಗಳು ಸಂಬಂಧಿಸಿದ ಬ್ಯಾಂಕ್ ಅಧಿಕಾರಿಗಳಿಗೆ ಸಾಲ ಮರುಪಾವತಿಗೆ ಒತ್ತಾಯಿಸದಂತೆ ಸೂಚನೆ ನೀಡಬೇಕು ಎಂದು ಲಕ್ಷ್ಮೇಶ್ವರ ತಾಲೂಕಾ ಕಿಸಾನ್ ಜಾಗೃತಿ ಸಂಘದ ವತಿಯಿಂದ ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅಧ್ಯಕ್ಷ ಟಾಕಪ್ಪ ಸಾತಪೂತೆ, ಅತಿವೃಷ್ಟಿಯಿಂದ ರೈತರು ಬೆಳೆದ ಬೆಳೆಗಳು ಹಾಳಾಗಿವೆ. ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ್ದ ಹೆಸರು, ಶೇಂಗಾ, ಈರುಳ್ಳಿ, ಗೋವಿನ ಜೋಳ, ಮೆಣಸಿನಕಾಯಿ ಬೆಳೆಗಳು ಹಾಳಾಗಿವೆ. ರೈತರು ಖರ್ಚು ಮಾಡಿದ ಹಣವೂ ವಾಪಸ್ ಬಾರದಂತಾಗಿದೆ. ಈ ವೇಳೆ ಬ್ಯಾಂಕ್ ಅಧಿಕಾರಿಗಳು ಸಾಲ ಮರುಪಾವತಿ ಮಾಡುವಂತೆ ರೈತರಿಗೆ ನೋಟೀಸ್ ನೀಡುವ ಮೂಲಕ ಒತ್ತಾಯಿಸುವುದು ಸರಿಯಲ್ಲ. ಇದರಿಂದ ರೈತರು ಮಾನಸಿಕ ಆಘಾತಕ್ಕೆ ಒಳಗಾಗಿ ಆತ್ಮಹತ್ಯೆಯ ದಾರಿ ಹಿಡಿಯುವಂತೆ ಆಗಿದೆ. ಆದ್ದರಿಂದ ಬ್ಯಾಂಕ್ ಅಧಿಕಾರಿಗಳು ರೈತರಿಗೆ ನೋಟೀಸ್ ನೀಡದಂತೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ಸೂಚನೆ ನೀಡಿ ರೈತರ ಹಿತ ಕಾಪಾಡುವ ಕಾರ್ಯ ಮಾಡಬೇಕು. ಇಲ್ಲವಾದಲ್ಲಿ ಬ್ಯಾಂಕ್ ಶಾಖೆಯ ಮುಂದೆ ಪ್ರತಿಭಟನೆ ಮಾಡಲಾಗುವುದು ಎಂದು ಹೇಳಿದರು.

ಈ ವೇಳೆ ಕಿಸಾನ್ ಜಾಗೃತಿ ಸಂಘದ ನಾಗರಾಜ ಪಾಟೀಲ, ಫಕ್ಕಿರೇಶ ಶಿವಬಸಣ್ಣವರ, ಬಸನಗೌಡ ಕೊರಡೂರ, ಶಂಕರಗೌಡ ಪಾಟೀಲ, ಸದಾನಂದ ಪೂಜಾರ, ಮಹಾದೇವಪ್ಪ ಕೋಡಿಹಳ್ಳಿ, ಬಸವರಾಜ ಬೆಂತೂರ, ಮಹಾಂತೇಶ ಶ್ಯಾಗೋಟಿ ಮುಂತಾದವರಿದ್ದರು.

## ಯಾರದ್ದೋ ಒತ್ತಡಕ್ಕೆ ಮಣಿದು ಆತುರಾತುರವಾಗಿ ಜಾತಿ ಜನಗಣತಿ: ವಿಜಯೇಂದ್ರ ಆಕ್ಷೇಪ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ನಡೆಯುತ್ತಿರುವ ಜಾತಿ ಜನಗಣತಿ ದಿನೇದಿನೇ ಗೊಂದಲಮಯವಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ ವಿಜಯೇಂದ್ರ ಅವರು ಆರೋಪಿಸಿದ್ದಾರೆ. ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜ್ಯ ಸರಕಾರ ದಿನಕ್ಕೊಂದು ಬದಲಾವಣೆ ಹೇಳುತ್ತಿದೆ. ಆಯೋಗವು ಪೂರ್ವ ತಯಾರಿ ಇಲ್ಲದೇ ಆತುರಾತುರವಾಗಿ, ಯಾರದೋ ಒತ್ತಡಕ್ಕೆ ಮಣಿದು ಗಣತಿ ಮಾಡುತ್ತಿದೆ. ಮೊನ್ನೆ ಡಿ.ಕೆ.ಶಿವಕುಮಾರ್ ಅವರು, 60 ಪ್ರಶ್ನೆಗಳಿಗೆ ಯಾರು ಉತ್ತರ ಕೊಡಲು ಸಾಧ್ಯ ಎಂದಿದ್ದಾರೆ. ಅಸಂಬದ್ಧವಾಗಿ ಅನೇಕ ಪ್ರಶ್ನೆಗಳನ್ನು ಸೇರಿಸಿದ್ದಾರೆ ಎಂದು ಟೀಕಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka